# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Volume: 01 | Issue : 46 | FRIDAY 24-04-2026 | PRGI No : KNKAN/26/A0962 | Pages:4 | Rs.2.00 | M: 9742418836


## ಖರ್ಗೆ ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ




ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿಯವರನ್ನು ಉಗ್ರವಾಗಿ ಎಂದಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯನ್ನು ಖಂಡಿಸಿ, ರಾಜ್ಯ ಬಿಜೆಪಿ ವಿಧಾನಸೌಧದ ಆವರಣದಲ್ಲಿರುವ ಮಹಾತ್ಮಗಾಂಧೀಜಿ ಪ್ರತಿಮೆ ಬಳಿ ಧರಣಿ ನಡೆಸಿತು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆದ ಧರಣಿ ಪ್ರತಿಭಟನೆಯಲ್ಲಿ ಪ್ರತಿಪಕ್ಷಗಳ ನಾಯಕರಾದ ಆರ್. ಅಶೋಕ್, ಛಲವಾದಿ ನಾರಾಯಣ ಸ್ವಾಮಿ, ಕೇಂದ್ರ ಸಚಿವ ಶೋಭಾಕಲಂದಾಜೆ ಸೇರಿದಂತೆ ಬಿಜೆಪಿಯ ಹಲವು ಶಾಸಕರು, ಸಂಸದರು ಭಾಗಿಯಾಗಿ ಖರ್ಗೆ ಅವರ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿದರು. ಪ್ರಧಾನಿ ಮೋದಿಯವರನ್ನು ಉಗ್ರವಾದಿ ಎಂದಿರುವ ಎಐಸಿಸಿ ಅಧ್ಯಕ್ಷರು ಕೂಡಲೇ ದೇಶದ ಜನರ ಕ್ಷಮೆ ಕೇಳಬೇಕು ಎಂದು ಪ್ರತಿಭಟನೆ ನಡೆಸಿದ ಬಿಜೆಪಿ, ಶಾಸಕರು, ಸಂಸದರು ಆಗ್ರಹಿಸಿದರು.

## ಬಿಜೆಪಿಯ ಅಪಪ್ರಚಾರಕ್ಕೆ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ: ಸಿ.ಎಂ ಸಿದ್ದರಾಮಯ್ಯ

ಪಿರಿಯಾಪಟ್ಟಣ : ಬಿಜೆಪಿಯ ಅಪಪ್ರಚಾರಕ್ಕೆ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ ನೀಡುತ್ತಿದ್ದೇವೆ. ನಮ್ಮ ಅಭಿವೃದ್ಧಿ ಕಾರ್ಯಗಳು ಜನರಿಗೆ ಮುಟ್ಟಿವೆ. ಜನ ನಮ್ಮ ಪರವಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿಗೆ ಖಡಕ್ ಉತ್ತರ ನೀಡಿದರು.

ಅವರು ಇಂದು ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾಪಂಚಾಯತ್ ವತಿಯಿಂದ ಪಿರಿಯಾಪಟ್ಟಣದ ಪಾರ್ಕ್ ಊಪ್ಪಲಿನಲ್ಲಿ ಆಯೋಜಿಸಲಾಗಿದ್ದಕಾರ್ಯಕ್ರಮದಲ್ಲಿ ಶಕ್ತಿ ದೇವತೆ ಶ್ರೀ ಮಸಣಿಕಮ್ಮ ದೇವಸ್ಥಾನ ನಿರ್ಮಾಣ, ಒಕ್ಕಲಿಗ ಸಂಘದ ಸಹಯೋಗದೊಂದಿಗೆ ನಿರ್ಮಿಸುತ್ತಿರುವ ಕುವೆಂಪು ಭವನ ಹಾಗೂ ಬೆಟ್ಟದ ಪುರ ಗ್ರಾಮದ ಶ್ರೀ ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಬೆಟ್ಟಕ್ಕೆ ಹೋಗುವ ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಇಲಾಖೆಗಳ 419.78 ಕೋಟಿಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಅಭಿವೃದ್ಧಿ ಕಾಮಗಾರಿಗಳು ಆಗುತ್ತಿದ್ದು ಈ ಬಾರಿಯ ಆಯವ್ಯಯದಲ್ಲಿ ಸುಮಾರು 82 ಸಾವಿರ ಕೋಟಿ ರೂಗಳನ್ನು ಅಭಿವೃದ್ಧಿ ಕೆಲಸಗಳಿಗೆ ಮೀಸಲಿರಿಸಿದೆ ಎಂದರು.



**ವಿಶ್ವಮಾನವ ಕುವೆಂಪು ಆಶಯ ನಮ್ಮದು**

ಕುವೆಂಪು ಅವರು ವಿಶ್ವಮಾನವರಾಗುವ ಪ್ರಯತ್ನವನ್ನು ಮಾಡಿದ್ದರು. ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟವಾಗಿಸಬೇಕು ಎಂದು ಬಯಸಿದ್ದರು. ಎಲ್ಲರೂ ಮನುಷ್ಯರಾಗಿ ಬಾಳಬೇಕೆನ್ನುವ ಆಶಯವನ್ನು ಹೊಂದಿದ್ದ ಕುವೆಂಪು ಅವರ ಭವನ ಇಲ್ಲಿ ನಿರ್ಮಾಣವಾಗುತ್ತಿರುವುದು ಸ್ವಾಗತಾರ್ಹ ಎಂದರು.

**50 ಕೋಟಿ ರೂ ವೆಚ್ಚದಲ್ಲಿ ರಸ್ತೆ ಕಾಮಗಾರಿ**

ಬೆಟ್ಟದಪುರ ಗ್ರಾಮದ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಬೆಟ್ಟಕ್ಕೆ ಹೋಗುವ ರಸ್ತೆ ನಿರ್ಮಾಣ ಕಾಮಗಾರಿಯನ್ನು 50 ಕೋಟಿ ರೂ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು ಇದರಿಂದ ಜನರಿಗೆ ಅನುಕೂಲವಾಗಲಿದೆ ಎಂದರು.

ಸಚಿವರಾದ ವೆಂಕಟೇಶ್ ಅವರು ಪಿರಿಯಾಪಟ್ಟಣದ ಶಾಸಕರಾದ ನಂತರ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದಾರೆ ಎಂದು ಮುಖ್ಯಮಂತ್ರಿಗಳು ಶ್ಲಾಘಿಸಿದರು.

**ನುಡಿದಂತೆ ನಡೆಯುವ ಸರ್ಕಾರ ನಮ್ಮದು**

ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದ್ದು ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಮೂರು ವರ್ಷಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದು ಮುಂದೆಯೂ ಈ ಯೋಜನೆಗಳನ್ನು ಮುಂದುವರೆಸಲಾಗುವುದು. ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದ ವಿರೋಧ ಪಕ್ಷ ಪ್ರಸ್ತುತ ಚುನಾವಣೆ ನಡೆಯುತ್ತಿರುವ ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡುತ್ತಿದ್ದಾರೆ. ನಮ್ಮ ಸರ್ಕಾರ ಅಭಿವೃದ್ಧಿಗೂ ಹಣವನ್ನು ಮೀಸಲಿರಿಸಿದೆ ಎನ್ನಲು ಇಂದು ಶಂಕುಸ್ಥಾಪನೆಯಾಗಿರುವ 419.78 ಕೋಟಿ ರೂಗಳ ಅಭಿವೃದ್ಧಿ ಕಾಮಗಾರಿಗಳೇ ಸಾಕ್ಷಿ ಎಂದರು.

**ವಿರೋಧ ಪಕ್ಷಗಳು ಅನಗತ್ಯವಾಗಿ ಟೀಕೆ ಮಾಡುತ್ತಿವೆ**

ವಿರೋಧ ಪಕ್ಷಗಳು ಅನಗತ್ಯವಾಗಿ ಟೀಕೆ ಮಾಡುತ್ತಿದ್ದು ಅದರಲ್ಲಿ ಸತ್ಯಾಂಶವಿಲ್ಲ. ಟೀಕೆಗಳು ವಾಸ್ತವದ ನೆಲೆಗಟ್ಟಿನಲ್ಲಿರಬೇಕು. ಸುಳ್ಳು ಹೇಳುವುದನ್ನೇ ಕಸಬು ಮಾಡಿಕೊಳ್ಳದೆ ಕೈಗೊಂಡಿರುವ ಕೆಲಸಗಳ ಬಗ್ಗೆ ಮಾತನಾಡಬೇಕು. ಅವರು ಅಧಿಕಾರದಲ್ಲಿದ್ದಾಗ ನಾಲ್ಕು ವರ್ಷಗಳ ಕಾಲ ಏನು ಮಾಡಿದ್ದಾರೆಂದು ಜನರ ಮುಂದಿಡಬೇಕು. ನಾವು ಅಭಿವೃದ್ಧಿ ಕಾರ್ಯಗಳ ಮೂಲಕವೇ ಬಿಜೆಪಿಯ ಅಪಪ್ರಚಾರಕ್ಕೆ ಉತ್ತರ ಕೊಡುತ್ತಿದ್ದೇವೆ ಎಂದರು.

## ನಾಳೆ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಕಾರ್ಯಕ್ರಮ



ಗೋಕಾಕ: ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿರುವುದು.

**ಬೆಳಗಾವಿ ವಾರ್ತೆ ಗೋಕಾಕ:** ಶನಿವಾರ ದಿನಾಂಕ 25 ರಂದು ನಗರದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಪ್ರಕಾಶ್ ಕಂಬಿ ಹೇಳಿದರು.

ಬುಧವಾರದಂದು ನಗರದ ಶ್ರೀ ವಿಠ್ಠಲ ರುಕ್ಮಿಣಿ ಸಭಾಂಗಣದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರ ಮಾತನಾಡಿದರು.

ಮುಂಜಾನೆ 8:30 ರಿಂದ 10:30 ಘಂಟೆಯ ವರೆಗೆ ನಗರದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಶ್ರೀ ವಿಠ್ಠಲ ರುಕ್ಮಿಣಿ ಸಭಾಂಗಣದ ವರೆಗೆ ಶ್ರೀಮದ್ ಕಾಶೀ ಜ್ಞಾನ ಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದ ಮಹಾಸ್ವಾಮಿಗಳು, ಶ್ರೀ ಕಾಶೀ ಮಹಾಪೀಠ, ವಾರಾಣಸಿ ಇವರ ಸಾರೋಟೋತ್ಸವ, ಮಹಿಳೆಯರ ಕುಭಮೇಳ, ವಿವಿಧ ಕಲಾತಂಡಗಳೊಂದಿಗೆ ಭವ್ಯ ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. 10:30ಕ್ಕೆ ಶ್ರೀ ವಿಠಲ್ ರುಕ್ಮಿಣಿ ಸಭಾಂಗಣದಲ್ಲಿ ಧರ್ಮಸಭೆ ನಡೆಯಲಿದೆ.

ಶ್ರೀಮದ್ ಕಾಶೀ ಜ್ಞಾನ ಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಕಾರ್ಯಕ್ರಮದಲ್ಲಿ ಶ್ರೀ ಷ.ಬ್ರ ಚಂದ್ರಶೇಖರ್ ಶಿವಾಚಾರ್ಯ ಮಹಾಸ್ವಾಮಿಗಳು, ಶೂನ್ಯ ಸಂಪಾದನ ಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು, ಶ್ರೀ ಷ.ಬ್ರ ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಮ.ಘ.ಚ ಡಾ.ಪವಾಡೇಶ್ವರ ಮಹಾಸ್ವಾಮಿಗಳು, ಶ್ರೀ. ಷ.ಬ್ರ ಶಿವಲಿಂಗೇಶ್ವರ ಮಹಾಸ್ವಾಮಿಗಳು, ಶ್ರೀ ಷ.ಬ್ರ ರಾಜಶೇಖರ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಷ.ಬ್ರ ರೇವಣಸಿದ್ಧ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಷ.ಬ್ರ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಮ್ಮುಖ ವಹಿಸಲಿದ್ದಾರೆ.

ಅತಿಥಿಗಳಾಗಿ ಗೋಕಾಕ ಶಾಸಕ ರಮೇಶ ಜಾರಕಿಹೊಳಿ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ, ಜಮಖಂಡಿ ಶಾಸಕ ಜಗದೀಶ್ ಗುಡಗುಂಟಿ, ಕಾಂಗ್ರೆಸ್ ಮುಖಂಡ ಅಶೋಕ್ ಪೂಜಾರಿ ಸೇರಿದಂತೆ ಅನೇಕ ಮುಖಂಡರು ಭಾಗವಹಿಸಲಿದ್ದಾರೆ.

ಸದರಿ ಕಾರ್ಯಕ್ರಮದಲ್ಲಿ ಗೋಕಾಕ ಹಾಗೂ ಮೂಡಲಗಿ ತಾಲೂಕಿನ ಸರ್ವ ಸಮಾಜದ ಭಾಂಧವರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಂಗಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಕಂಬಿ ಅವರು ವಿನಂತಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ರವೀಂದ್ರ ಹಿರೇಮಠ, ಸಂಗಮೇಶ ಗುಡದೂರ ಕಲ್ಮಠ, ಪಂಚಾಕ್ಷರಿ ಹೊಸಟ್ಟಿ, ಈರಣ್ಣ ಹಿರೇಮಠ, ಸೋಮಶೇಖರ್ ಹಿರೇಮಠ, ವಿರೇಂದ್ರ ಹಿರೇಮಠ ಉಪಸ್ಥಿತರಿದ್ದರು.

## ಸಾವಿರಾರೂ ಭಕ್ತರ ಮದ್ಯ ವಿಜ್ರಂಭಣೆಯಿಂದ ಜರುಗಿದ ಪರಮಪೂಜ್ಯ ಮಹಾದೇವಪ್ಪಜ್ಜನವರ ಬ್ರಹ್ಮರಥೋತ್ಸವ



ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ಬುಧವಾರ ರಂದು ಪರಮಪೂಜ್ಯ ಮಹಾದೇವಪ್ಪಜ್ಜನವರ ಬ್ರಹ್ಮರಥೋತ್ಸವವು ಜರುಗಿತು.

**ಬೆಳಗಾವಿ ವಾರ್ತೆ ಉಗರಗೋಳ:** ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ಬುಧವಾರ ರಂದು ಪರಮಪೂಜ್ಯ ಮಹಾದೇವಪ್ಪಜ್ಜನವರ ಬ್ರಹ್ಮರಥೋತ್ಸವವು ಸಾವಿರಾರೂ ಭಕ್ತರ ಮದ್ಯ ವಿಜ್ರಂಭಣೆಯಿಂದ ಜರುಗಿತು.

ಚಿಕ್ಕುಂಬಿ ನಾಗಲಿಂಗಮಠದ ಅಭಿನವ ನಾಗಲಿಂಗ ಶ್ರೀಗಳು, ಸವದತ್ತಿ ಗುರ್ಲಹೊಸೂರ ಚಿದಂಬರೇಶ್ವರಮಠದ ಪ್ರಸನ್ನ ದೀಕ್ಷೀತ ಪೂಜ್ಯರು, ವೇ ಮೂ ರೇವಣಶಿದ್ದಯ್ಯ ಹಿರೇಮಠ, ಡಾ, ಆರ್ ಸಿ ಬಡಿಗೇರ, ಸಂಗನಗೌಡ ಸುಳ್ಳದ, ಪ್ರಭು ಗೋವಣ್ಣವರ, ನಾಗಪ್ಪ ವಾರೇಪ್ಪನವರ, ಉಮೇಶ ಮೇಣಸಿನಕಾಯಿ, ಶೇಖಪ್ಪ ವಾರೇಪ್ಪನವರ, ನಿಂಗನಗೌಡ ಸಂಗನಗೌಡ್ರ, ಮಮ್ಮದಲಿ ದೊಡಮನಿ ಹಾಗೂ ಗ್ರಾಮಸ್ಥರು ಇದ್ದರು.

## ವಿಶ್ವಗುರು ಬಸವಣ್ಣನವರ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಬಸವ ಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಧಾರವಾಡ ಜಿಲ್ಲಾ ಘಟಕದ ಆಶ್ರಯದಲ್ಲಿ ಬಸವ ಜಯಂತಿಯ ಅಂಗವಾಗಿ ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರ ಹಾಗೂ ಎಲ್ಲ ಶರಣರ ಭಾವಚಿತ್ರ ಹಾಗೂ ವಚನಸಾಹಿತ್ಯದ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗಿತ್ತು. ಮೆರವಣಿಗೆಯು ಗೋಕುಲ ರಸ್ತೆ, ಅರ್ಜುನ ವಿಹಾರ ಕ್ರಾಸ್‌ನಲ್ಲಿ ಪ್ರಾರಂಭವಾಗಿ ಲೋಹಿಯಾನಗರ, ಮುರಾರ್ಜಿನಗರದ ಮೂಲಕ ಬಸವಕೇಂದ್ರದ ವಿ.ಎಂ.ಕೊಟಗಿ ಬಸವ ಸಂಸ್ಕೃತಿ ಶಾಲೆಗೆ ಬಂದು ಸೇರಿತು. ಮೆರವಣಿಗೆಯಲ್ಲಿ ಬಸವಾದಿ ಶರಣರ ವಚನಗಳನ್ನು ಹಾಡಿದರು. ಬಸವ ಸಂಸ್ಕೃತಿ ಶಾಲೆಯ ಮಕ್ಕಳು ಶರಣರ ವೇಷಭೂಷಣದಲ್ಲಿ ಸಂತೋಷದಿಂದ ಪಾಲ್ಗೊಂಡಿದ್ದರು.

ವಿಶೇಷವಾಗಿ ಕಂಚಿನ ಕಂಠದ ಗಾಯಕಿ, ದಾನೇಶ್ವರಿ ಸಂಗೀತ ಪಾಠ ಶಾಲೆಯ ಪ್ರೊ ಶೋಭಾ ಜಾಬಿನ್ ಅವರು ಅದ್ಭುತವಾಗಿ ವಚನ ಗಾಯನ ಪ್ರಸ್ತುತಪಡಿಸಿದರು.

ಬಸವಕೇಂದ್ರದ ವಿ.ಎಂ.ಕೊಟಗಿ ಬಸವ ಸಂಸ್ಕೃತಿ ಶಾಲೆಯಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ಧಾರವಾಡ ಜಿಲ್ಲಾ ಘಟಕದ ಅಧ್ಯಕ್ಷ ಎಂ.ವಿ. ಗೊಂಗಡಶೆಟ್ಟಿ ಅವರು ಉದ್ಘಾಟಿಸಿದರು. ಬಸವ ಕೇಂದ್ರದ ಉಪಾಧ್ಯಕ್ಷ ಪ್ರಭು ಅಂಗಡಿ ಅವರು ಅಧ್ಯಕ್ಷತೆ ವಹಿಸಿದ್ದರು. ಪ್ರೊ ಮಲ್ಲಿಕಾರ್ಜುನ ಯಾವಗಲ್ ಅವರು ಅನುಭಾವ ನೀಡಿದರು. ಕೆ.ಎಸ್. ಇನಾಮತಿ ನಿರೂಪಿಸಿದರು. ಶಿವಯೋಗಿ ಮೂಖರ್ಡೆ ಅವರು ಪ್ರಸಾದ ಸೇವೆಗೈದರು. ನೀಲಕಂಠ ಅಸೂಟಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ ಹಾಗೂ ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಸೋಹನ್ ಸುರೇಶ್ ಹೊರಕೇರಿ , ಡಾ ಪ್ರಕಾಶ ಮುನ್ನೊಳ್ಳಿ, ಇದ್ದರು. ಶರಣರ ವೇಷಭೂಷಣ ತೊಟ್ಟ ಮಕ್ಕಳ ಹೆಸರು ಹಾಗೂ ಶರಣರ ಹೆಸರು ಇಂತಿವೆ. ಕೃತಿಕಾ (ಅಕ್ಕಮಹಾದೇವಿ), ಸಂಜನಾ (ಗಂಗಾಂಬಿಕಾ), ಶ್ರೇಯಾ (ನೀಲಾಂಬಿಕಾ), ಚಂದನಾ (ಆಯ್ದಕ್ಕಿ ಲಕ್ಕಮ್ಮ), ರಾಶಿ (ಕಲ್ಯಾಣಮ್ಮ), ಪೂರ್ವಿಕಾ



(ಅಕ್ಕಮಹಾದೇವಿ), ಸಮರ್ಥ (ಅಲ್ಲಮಪ್ರಭು), ಖುಷಿ (ಸತ್ಯಕ್ಕ), ಅಪ್ಪು (ಬಸವಣ್ಣ), ವಿಜಯ್ (ಬಸವಣ್ಣ ಮಹಾರಾಜ್), ಶ್ರೇಯಸ್ (ಹರಳಯ್ಯ), ಸಮರ್ಥ (ಬಸವಣ್ಣ), ಅಶ್ವಿನಿ (ಚನ್ನಬಸವಣ್ಣ), ರೇವತಿ (ಮುಕ್ತಾಯಕ್ಕ). ಮಕ್ಕಳು ಸಂತಸದಿಂದ ಕುಣಿದು ಕುಪ್ಪಳಿಸಿದರು. ಶಿಕ್ಷಕರಾದ ಮಧು ಕಂಠಿ, ನೇಹಾ ಕಂಠಿ, ಈಶ್ವರಿ ಬೆಸ್ತಾ, ಆರತಿ ಜಮ್ಮಾಳ, ಶೃತಿ ಇಂಬ್ರಹಿಂಪುರ ಅವರು ಮಕ್ಕಳಿಗೆ ಪ್ರೇರಣೆ ನೀಡಿದ್ದಾರೆ.

ಶಂಕರ್ ಕೋಳಿವಾಡ, ದಾಕ್ಷಾಯಣಿ ಕೋಳಿವಾಡ, ಬಸವರಾಜ ಲಿಂಗಶೆಟ್ಟರ್, ಬಸವರಾಜ ಕಮಡೊಳ್ಳಿ, ಶೋಭಾ ಜಾಬಿನ್, ಲಕ್ಷ್ಮೀ ಲಿಂಗಶೆಟ್ಟರ್, ಉಮಾ ಹುಲಿಕಂತಿಮಠ, ಪ್ರಭು ಶೆಟ್ಟರ್, ವೀರಣ್ಣ ಗೋವೇಶ್ವರ, ಶಾಂತಾ ಪಟ್ಟಣಶೆಟ್ಟಿ, ವಿದ್ಯಾ ವಂಟಮುರಿ, ಅನುಪಮಾ ಪಾಟೀಲ, ಬಸವ ಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾ ಧಾರವಾಡ ಜಿಲ್ಲಾ ಘಟಕ, ಮಹಿಳಾ ಘಟಕ, ಯುವ ಘಟಕದ ಪದಾಧಿಕಾರಿಗಳು, ಸದಸ್ಯರು, ಬಸವಾಭಿಮಾನಿಗಳು, ಸಾಹಿತ್ಯಾಸಕ್ತರು, ಶಿಕ್ಷಕರು , ಮಕ್ಕಳು, ಮುಂತಾದವರು ಉತ್ಸಾಹದಿಂದ ಭಾಗವಹಿಸಿದ್ದರು.

## ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ ಕಾರ್ಯಕ್ರಮದಡಿ ಸಂಸ್ಕರಣೆ ಮತ್ತು ಪ್ಯಾಕೇಜಿಂಗ್ ಘಟಕಗಳನ್ನು ಸ್ಥಾಪಿಸಲು ಆಸಕ್ತ ರೈತರು ಹಾಗೂ ಸಂಸ್ಥೆಗಳಿಂದ ಅರ್ಜಿ ಆಹ್ವಾನ

ಧಾರವಾಡ: 2026–27 ನೇ ಸಾಲಿಗೆ ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ ಕಾರ್ಯಕ್ರಮದಡಿ ಬೇಳೆ ಕಾಳುಗಳ ಉತ್ಪಾದನೆಯಲ್ಲಿ ದೇಶವನ್ನು ಸ್ವಾಲಂಬಿಯನ್ನಾಗಿಸುವ ಉದ್ದೇಶದಿಂದ ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ ಜಾರಿಗೆ ತಂದಿದೆ. ಈ ಯೋಜನೆಯಡಿ ಸಂಸ್ಕರಣೆ ಮತ್ತು ಪ್ಯಾಕೇಜಿಂಗ್ ಘಟಕಗಳನ್ನು ಸ್ಥಾಪಿಸಲು ಆಸಕ್ತ ರೈತರು ಹಾಗೂ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಮೇ 20, 2026 ರೊಳಗೆ ಅರ್ಜಿ ಸಲ್ಲಿಸಬೇಕು. ದ್ವಿದಳ ಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸಲು ಹಾಗೂ ರೈತರ ಆದಾಯ ಹೆಚ್ಚಿಸಲು ಗುರಿ ಹೊಂದಲಾಗಿದ್ದು, ಈ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ 60:40 ಅನುಪಾತದ ಸಹಾಯಧನದಡಿ ಯೋಜನಾ ವೆಚ್ಚದ ಶೇ.33 ರಷ್ಟು ಸಹಾಯಧನ (ರೂ.25.00 ಲಕ್ಷಗಳ ಗರಿಷ್ಟ ಮಿತಿಯೊಂದಿಗೆ) ನೀಡಲಾಗುವುದು. ಕಟ್ಟಡ ಮತ್ತು ಗೋದಾಮು ನಿರ್ಮಾಣಕ್ಕೆ ಸಹಾಯಧನದ ಮೊತ್ತದಲ್ಲಿ ಗರಿಷ್ಠ ಶೇ.30 ರಷ್ಟು ಹಣವನ್ನು ಬಳಸಿಕೊಳ್ಳಲು ಅವಕಾಶವಿದೆ. ರೈತ ಉತ್ಪಾದಕ ಸಂಸ್ಥೆಗಳು, ಕ್ಲಸ್ಟರ್ ಮಟ್ಟದ ಒಕ್ಕೂಟಗಳು, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು ಹಾಗೂ ವೈಯುಕ್ತಿಕ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧ ಪಟ್ಟ ತಾಲ್ಲೂಕ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಮಾನುಜರ ಸಮಾನತೆಯ ಚಿಂತನೆ ಇಂದಿಗೂ ಪ್ರಸ್ತುತ



**ಬೆಳಗಾವಿ ವಾರ್ತೆ ವಿಜಯಪುರ:** ರಾಮಾನುಜರು ಸಮಾಜದಲ್ಲಿನ ತಾರತಮ್ಯ ತೊಡೆದು ಹಾಕಿ, ಮಾನವೀಯತೆ-ಭಕ್ತಿಯನ್ನು ಎತ್ತಿ ಹಿಡಿದ ಮಹಾನ್ ಸಂತರು. ಅವರು ಬೋಧಿಸಿದ ಜಗತ್ತಿನ ಸತ್ಯತೆ-ಸಾಮಾಜಿಕ ಸಮಾನತೆ ಇಂದಿಗೂ ಪ್ರಸ್ತುತ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ಬುಧವಾರ ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡ ರಾಮಾನುಜಾಚಾರ್ಯರ ಜಯಂತ್ಯೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜಾಗತೀಕರಣದ ಈ ಯುಗದಲ್ಲಿ ವೈವಿಧ್ಯತೆಯಲ್ಲಿ ಏಕತೆ ಸಾಧಿಸಲು, ಮಾನಸಿಕ ಶಾಂತಿ ಮತ್ತು ಆಧ್ಯಾತ್ಮಿಕ ನೆಮ್ಮದಿಗಾಗಿ ರಾಮಾನುಜರ ನಿಷ್ಕಲ್ಮಶ ಭಕ್ತಿಮಾರ್ಗವು ಮಾರ್ಗದರ್ಶಿಯಾಗಿದೆ. ದೇವಸ್ಥಾನದ ಬಾಗಿಲುಗಳನ್ನು ತೆರೆಯುವ ಮೂಲಕ ಎಲ್ಲರಲ್ಲಿ ಸಾಮಾಜಿಕ ಒಗ್ಗಟ್ಟನ್ನು ಸಾಧಿಸಿದ ರಾಮಾನುಜಾಚಾರ್ಯರ ತತ್ವಗಳು ಮಾನವತಾವಾದಿ, ಪ್ರೀತಿಯಾಧಾರಿತ ಸಮಾಜ ನಿರ್ಮಿಸಲು ಇಂದಿಗೂ ದಾರಿದೀಪವಾಗಿವೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಕಾರ್ಯ ದರ್ಶಿ ಸುನಂದಾ ಹುಣಶ್ಯಾಳ ಮಾತನಾಡಿ, ಶ್ರೀ ರಾಮಾನುಜರ ಉಜ್ವಲ ವ್ಯಕ್ತಿತ್ವ, ಬುದ್ದಿ ತೀಕ್ಷ್ಣತೆ, ಅದ್ಭುತ ಗ್ರಂಥರಚನಾ ಸಾಮರ್ಥ್ಯ, ಅಸದೃಶ್ಯ ಪಾಂಡಿತ್ಯ, ಕಾರುಣ್ಯ, ಕಾರ್ಯ ತತ್ಪರತೆ, ಪರಿಶುದ್ಧ ಜೀವನ, ತೀರ್ಥಯಾತ್ರೆ, ದೇವಾಲಯ ಪುನರುದ್ಧಾರದಂತಹ ಗುಣಗಳು ಇಂದಿನ ಪೀಳಿಗೆಗೆ ದಾರಿದೀಪವಾಗಿವೆ ಎಂದು ಹೇಳಿದರು. ಶಿಕ್ಷಕರಾದ ಸಂಗೀತಾ ಅಂಕಲಗಿ, ರೇಣುಕಾ ಭಜಂತ್ರಿ, ವೀರೇಶ ಹುಣಶ್ಯಾಳ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು.

# ಭಿತ್ತಿಚಿತ್ರ ಪ್ರದರ್ಶಿಸಿ ಭೂ ದಿನದ ಜಾಗೃತಿ ಮೂಡಿಸಿದ ಬಂಡೆ ಸಹೋದರಿಯರು

**ಬೆಳಗಾವಿ ವಾರ್ತೆ ವಿಜಯಪುರ:** ವಿಶ್ವ ಭೂ ದಿನವನ್ನು ಪ್ರತಿವರ್ಷ ಏಪ್ರಿಲ್ 22 ರಂದು ಆಚರಿಸಲಾಗುತ್ತದೆ. ಈ ನಿಮಿತ್ತ ತಾಲೂಕಿನ ನಾಗಠಾಣ ಗ್ರಾಮದ ಮಕ್ಕಳಾದ ಅನುಶ್ರೀ-ಶ್ರೀನಿಧಿ ಬಂಡೆ ಅವರು 'ಭೂಮಿಯ ರಕ್ಷಣೆ-ನಮ್ಮೆಲ್ಲರ ಹೊಣೆ', 'ಪ್ಲಾಸ್ಟಿಕ್ ಬೇಡ-ಪರಿಸರ ಉಳಿಸಿ',' ಇರುವದೊಂದೇ ಭೂಮಿ-ಇದೇ ನಮ್ಮ ತಾಯಿ','ಮರ ಬೆಳೆಸಿ-ಭೂಮಿ ಬೆಳೆಸಿ' ಎಂಬ ಘೋಷ ವಾಕ್ಯಗಳ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸುವ ಮೂಲಕ ವಿಶ್ವ ಭೂ ದಿನವನ್ನು ಆಚರಿಸಿ, ಜಾಗೃತಿ ಮೂಡಿಸಿದರು.




ಪರಿಸರ ಸಂರಕ್ಷಣೆ, ಹವಾಮಾನ ಬದಲಾವಣೆ ಮತ್ತು ಸುಸ್ಥಿರ ಜೀವನದ ಬಗ್ಗೆ ಜಾಗತಿಕವಾಗಿ ಜಾಗೃತಿ ಮೂಡಿಸುವ ದಿನ ಇದಾಗಿದೆ."ನಮ್ಮ ಶಕ್ತಿ, ನಮ್ಮ ಗ್ರಹ" ಇದು ಈ ವರ್ಷದ ಧ್ಯೇಯವಾಗಿದ್ದು, ಹಸಿರೀಕರಣ ಹೆಚ್ಚಿಸಲು ಹೆಚ್ಚೆಚ್ಚು ಗಿಡಮರಗಳನ್ನು ಬೆಳೆಸುವತ್ತ ಎಲ್ಲರೂ ಮುಂದಾಗಬೇಕಿದೆ.

ನಾವು ವಾಸಿಸುವ ಭೂಮಿ ತುಂಬಾ ಅಮೂಲ್ಯ. ಮನುಷ್ಯರು ಸೇರಿದಂತೆ ಪ್ರಾಣಿ, ಪಕ್ಷಿ ಮತ್ತು ಇನ್ನಿತರ ಜೀವ ಸಂಕುಲಗಳನ್ನು ಕೋಟ್ಯಂತರ ವರ್ಷಗಳಿಂದ ಸಲಹುತ್ತಿರುವ ಭೂಮಿಯ ಅಗಾಧತೆ ಅನನ್ಯ. ಭೂಮಿಯ ಮೇಲಿರುವ ಎಲ್ಲ ಜನರ ಮೂಲಭೂತ ಅವಶ್ಯಕತೆಗಳನ್ನು ಪೂರೈಸುವ ಶಕ್ತಿ ಈ ಭೂಮಿಗಿದೆ. ನಮ್ಮ ಬದುಕಿಗೆ ಅಗತ್ಯವಿರುವ ಗಾಳಿ, ನೀರು, ಆಹಾರಗಳೆಲ್ಲವನ್ನೂ ನಮ್ಮ ಭೂಮಿ ನಮಗೆ ನೀಡುತ್ತಿದೆ. ಆದ್ದರಿಂದ ಪ್ರತಿಯೊಬ್ಬರೂ ಈ ಭೂಮಿಗೆ ಸದಾ ಚಿರಋಣಿಯಾಗಿರಬೇಕು ಹಾಗೂ ಪರಿಸರ ಸ್ನೇಹಿ ಪರ್ಯಾಯ ಅಳವಡಿಸಿಕೊಳ್ಳಲು ಮತ್ತು ಮರುಬಳಕೆಗೆ ಪ್ರೋತ್ಸಾಹಿಸಲು ಎಲ್ಲರೂ ಮುಂದಾಗಬೇಕು ಎಂಬ ಕಾಳಜಿ ಅನುಶ್ರೀ-ಶ್ರೀನಿಧಿ ಅವರದ್ದಾಗಿದೆ.

# ಪಿಎಚ್.ಡಿ. ಪದವಿ ಪ್ರದಾನದಲ್ಲಿ ಗಂಭೀರ ಅಕ್ರಮ : ತಕ್ಷಣ ಕ್ರಮಕ್ಕೆ ದ್ರಾವಿಡ ವಿದ್ಯಾರ್ಥಿ ಪರಿಷತ್ ಒತ್ತಾಯ

**ಬೆಳಗಾವಿ ವಾರ್ತೆ ವಿಜಯಪುರ:** ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪಿಎಚ್.ಡಿ. (ಡ.ಆ.) ಪದವಿ ಪ್ರದಾನ ಪ್ರಕ್ರಿಯೆಯಲ್ಲಿ ಯುನಿವರ್ಸಿಟಿ ಗ್ರಾಂಟ್ಸ್ ಕಮಿಷನ್ (ಗಉಅ) ನಿಗದಿಪಡಿಸಿದ ನಿಯಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಲಾಗುತ್ತಿಲ್ಲ ಎಂಬ ಗಂಭೀರ ಆರೋಪಗಳು ವಿದ್ಯಾರ್ಥಿಗಳು ಹಾಗೂ ಸಂಶೋಧಕರ ವಲಯದಲ್ಲಿ ಕೇಳಿಬರುತ್ತಿವೆ ಎಂದು ದ್ರಾವಿಡ ವಿದ್ಯಾರ್ಥಿ ಪರಿಷತ್ ಸಂಘಟನೆ ತೀವ್ರ ಆತಂಕ ವ್ಯಕ್ತಪಡಿಸಿದೆ.




ಈ ಸಂದರ್ಭದಲ್ಲಿ ಮಾತನಾಡಿದ ದ್ರಾವಿಡ ವಿದ್ಯಾರ್ಥಿ ಪರಿಷತ್ ಮುಖಂಡ ಅಕ್ಷಯಕುಮಾರ್ ಅಜಮನಿ ಉನ್ನತ ಶಿಕ್ಷಣದ ಗುಣಮಟ್ಟವನ್ನು ಕಾಪಾಡುವ ಉದ್ದೇಶದಿಂದ ಯುಜಿಸಿ ರೂಪಿಸಿರುವ Minimum Standards and Procedure for Award of Ph.D. Degree ನಿಯಮಗಳು ಕೇವಲ ಮಾರ್ಗಸೂಚಿಗಳಲ್ಲ, ಅವು ಕಡ್ಡಾಯವಾಗಿ ಪಾಲಿಸಬೇಕಾದ ಶೈಕ್ಷಣಿಕ ಮಾನದಂಡಗಳಾಗಿವೆ. ಆದರೆ, ಕೆಲ ವಿಶ್ವವಿದ್ಯಾಲಯಗಳು ಈ ನಿಯಮಗಳನ್ನು ನಿರ್ಲಕ್ಷ್ಯ ಮಾಡುತ್ತಿರುವುದು ಶಿಕ್ಷಣ ವ್ಯವಸ್ಥೆಗೆ ಧಕ್ಕೆಯಾಗಿದೆ.

ಯುಜಿಸಿ ನಿಯಮಾವಳಿಗಳ ಪ್ರಕಾರ ಪಿಎಚ್.ಡಿ. ಪದವಿ ಪ್ರದಾನಕ್ಕೆ ಕೆಳಗಿನ ಅಂಶಗಳು ಕಡ್ಡಾಯವಾಗಿವೆ:

ಸಂಶೋಧನಾ ಪ್ರಬಂಧವನ್ನು ಕನಿಷ್ಠ ಇಬ್ಬರು ಬಾಹ್ಯ ತಜ್ಞರಿಂದ ಮೌಲ್ಯಮಾಪನ ಮಾಡುವುದು, ಸಕಾರಾತ್ಮಕ ವರದಿಗಳ ನಂತರ ಬಹಿರಂಗ ವೈವಾ-ವೋಸ್ ನಡೆಸುವುದು, ಕನಿಷ್ಠ ಒಂದು ಸಂಶೋಧನಾ ಲೇಖನವನ್ನು ಪಿಯರ್-ರಿವ್ಯೂಡ್ ಜರ್ನಲ್‌ನಲ್ಲಿ ಪ್ರಕಟಿಸುವುದು,

ಎರಡು ಸಂಶೋಧನಾ ಪ್ರಸ್ತುತಿಗಳನ್ನು ಕಾನ್ಫರೆನ್ಸ್/ಸೆಮಿನಾರ್‌ಗಳಲ್ಲಿ ನೀಡುವುದು, ಪ್ಲೇಜಿಯಾರಿಸಂ ಮಿತಿ ಪಾಲನೆ ನಿಗದಿತ ಅವಧಿಯೊಳಗೆ ಪ್ರಬಂಧ ಸಲ್ಲಿಕೆ ಪ್ರಾವಿಷನಲ್ ಸರ್ಟಿಫಿಕೇಟ್ ನೀಡದೇ ಇರುವುದು, ಇದರ ಜೊತೆಗೆ, ಪ್ರಿ-ಸಬ್ಮಿಷನ್ ಸೆಮಿನಾರ್, ರಿಸರ್ಚ್ ಅಡ್ವೈಸರಿ ಕಮಿಟಿ (ಖಂಅ) ಸಭೆಗಳು, ಪಾರದರ್ಶಕ ಪ್ರವೇಶ ಪ್ರಕ್ರಿಯೆ ಹಾಗೂ ಯುಜಿಸಿ ಮಾನ್ಯತೆ ಹೊಂದಿರುವ ಜರ್ನಲ್‌ಗಳಲ್ಲಿ ಮಾತ್ರ ಪ್ರಕಟಣೆಗಳ ಪರಿಗಣನೆ ಕಡ್ಡಾಯವಾಗಿದೆ.

ಆದರೂ, ಈ ನಿಯಮಗಳನ್ನು ಪಾಲಿಸದೆ ಪದವಿ ಪ್ರದಾನ ಮಾಡಲಾಗುತ್ತಿರುವುದು ವಿದ್ಯಾರ್ಥಿಗಳಿಗೆ ಅನ್ಯಾಯವಾಗುವುದಲ್ಲದೆ, ಪಿಎಚ್.ಡಿ. ಪದವಿಯ ಮೌಲ್ಯವನ್ನು ಕುಗ್ಗಿಸುವ ಕೆಲಸವಾಗಿದೆ ಎಂದು ದ್ರಾವಿಡ ವಿದ್ಯಾರ್ಥಿ ಪರಿಷತ್ ಸಂಘಟನೆ ಆರೋಪಿಸಿದೆ.

ಈ ಹಿನ್ನೆಲೆಯಲ್ಲಿ ಸಂಘಟನೆಯ ಪ್ರಮುಖ ಬೇಡಿಕೆಗಳಾದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಯುಜಿಸಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ತಕ್ಷಣ ಸೂಚನೆ ನೀಡಬೇಕು,

ಪಿಎಚ್.ಡಿ. ಪದವಿ ಪ್ರದಾನ ಪ್ರಕ್ರಿಯೆಯ ಮೇಲ್ವಿಚಾರಣೆಗಾಗಿ ಉನ್ನತ ಮಟ್ಟದ ತನಿಖಾ ಸಮಿತಿ ರಚಿಸಬೇಕು,

ನಿಯಮ ಉಲ್ಲಂಘನೆ ಮಾಡಿದ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು, ವಿದ್ಯಾರ್ಥಿಗಳಿಗಾಗಿ ವಿಶೇಷ ದೂರು ಪರಿಹಾರ ವ್ಯವಸ್ಥೆ (Grievance Cell) ಸ್ಥಾಪಿಸಬೇಕು, ಪಿಎಚ್.ಡಿ. ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಡಿಜಿಟಲ್ ಮತ್ತು ಪಾರದರ್ಶಕವಾಗಿ ಸಬೇಕು, ಸರ್ಕಾರ ತಕ್ಷಣ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳದಿದ್ದಲ್ಲಿ, ಮುಂದಿನ ದಿನಗಳಲ್ಲಿ ರಾಜ್ಯವ್ಯಾಪಿ ಹೋರಾಟವನ್ನು ಆರಂಭಿಸುವುದಾಗಿ ಸಂಘಟನೆ ಎಚ್ಚರಿಸಿದೆ.

ಈ ವೇಳೆ ಮುಖಂಡರಾದ ಚನ್ನು ಕಟ್ಟಿಮನಿ, ಗೌಡಪ್ಪ ಗೌಡ ಬಡಿಗೇರ, ರಾಹುಲ್ ಕಳಸದವರ (ಕಾರ್ಯದರ್ಶಿ), ಮಂಜುನಾಥ್ ಕವಳಿ, ಪ್ರತಾಪ ತೋಳನೂರ , ಆಕಾಶ ಕುರ್ಣಿ, ಭೀಮು ಬಡಿಗೇರ , ಪರಸು, ಸಾಯಬಣ್ಣ, ನಿಂಗಣ್ಣ, ಸಚಿನ್, ಸುದೀಪ, ರಾಕೇಶ್, ಸುನಿಲ್, ಭೀಮರಾಯ ವಿಶಾಲ್ ಮುಂತಾದವರಿದ್ದರು.

# ಕವಿವಿ ಘಟಿಕೋತ್ಸವ: ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್

ಧಾರವಾಡ: ಶಿಕ್ಷಣ, ಆಡಳಿತ ಮತ್ತು ಸಮಾಜ ಸೇವೆ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮೂವರು ಸಾಧಕರಿಗೆ ಕರ್ನಾಟಕ ವಿಶ್ವವಿದ್ಯಾಲಯ ಏ. 23ರಂದು ಗಾಂಧಿ ಭವನದಲ್ಲಿ ನಡೆಯಲಿರುವ ತನ್ನ 75ನೇ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪ್ರದಾನ ಮಾಡುತ್ತಿದೆ.

ಶಿಕ್ಷಣ ಕ್ಷೇತ್ರದಲ್ಲಿ ಡಾ. ಅಚ್ಯುತ ಸಾಮಂತ, ಆಡಳಿತ ಕ್ಷೇತ್ರದಲ್ಲಿ ಕರ್ನಾಟಕದ ಮುಖ್ಯ ಚುನಾವಣಾ ಆಯುಕ್ತ ಜಿ.ಎಸ್. ಸಂಗ್ರೇಶಿ ಮತ್ತು ಸಮಾಜ ಸೇವೆ ಕ್ಷೇತ್ರದಲ್ಲಿ ಹುಬ್ಬಳ್ಳಿಯ ಮಜೇಥಿಯಾ ಫೌಂಡೇಶನ್ ಸಂಸ್ಥಾಪಕ ಜಿತೇಂದ್ರ ಮಜೇಥಿಯಾ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗುತ್ತಿದೆ.

# ಮಂಗಳೂರು ಗ್ರಾಮದ ನರೇಗಾ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನಾಚರಣೆ



**ಬೆಳಗಾವಿ ವಾರ್ತೆ ಕುಕನೂರ :** ತಾಲ್ಲೂಕಿನ ಮಂಗಳೂರು ಗ್ರಾಮದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ರೋಜಗಾರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು.

ಕಾಮಗಾರಿ ಸ್ಥಳದಲ್ಲಿ ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಮಾತನಾಡಿ ಕೂಲಿಕಾರರು ಗುಳೆ ಹೋಗದಂತೆ ತಡೆಯಲು ಮಹಾತ್ಮಗಾಂಧಿ ನರೇಗಾ ಯೋಜನೆ ಕೂಲಿಕಾರರು ಸ್ವಾಭಿಮಾನದಿಂದ ತಮ್ಮ ಗ್ರಾಮದಲ್ಲಿ ಜೀವನ ನಡೆಸಲು ನೆರವಾಗಿದೆ. ಅದನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಹೇಳಿದರು. ಕೂಲಿಕಾರರು ನರೇಗಾ ಯೋಜನೆಯ ಜ್ಯೋತೆಗೆ PMSBY, PMJJBY ಇನ್ಸುರನ್ಸ ಗಳನ್ನು ಮಾಡಿಕೊಳ್ಳಬೇಕು, ವೃದ್ದಾಪ್ಯವನ್ನು ನೆಮ್ಮದಿಯಿಂದ ಕಳೆಯಲು ಅಟಲ್ ಪೆನ್ಷನ್ APY ಯೋಜನೆಯನೆಯನ್ನು ಅಥವಾ ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್ ಧನ್ ಯೋಜನೆಯಡಿ ನೊಂದಣಿ ಯಾಗಬೇಕು ಎಂದು ಹೇಳಿದರು.

ನರೇಗಾ ಯೋಜನೆಯಡಿ ವೈಯಕ್ತಿಕ ಕಾಮಗಾರಿಗಳನ್ನು ಮಾಡಿಕೊಂಡಲ್ಲಿ ಕೂಲಿಯ ಜ್ಯೊತೆಗೆ ಅಂತ ಕೆಲಸವೂ ಲಭಿಸಲಿದೆ ಎಂದರು.

ಸ್ಥಳದಲ್ಲಿ ತಾಂತ್ರಿಕ ಸಹಾಯಕರಾದ ಚೇತನ್ ಹಳ್ಳಿ, ಃಈಖಿ ಶರಣಪ್ಪ ಮೂಲಿಮನಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಭರತೇಶ, ಕಿರಣ್ ಕುಮಾರ, ಕಾಯಕ ಬಂಧುಗಳು ಕೂಲಿಕಾರರು ಹಾಜರಿದ್ದರು.

# ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ

## ಕ್ಷೇತ್ರದಲ್ಲಿ ಸ್ವಚ್ಛತೆ ಮತ್ತು ನದಿಗೆ ನೀರು ಹರಿಸಲು ಕ್ರಮ ಕೈಗೊಳ್ಳಿ: ಡಾ. ಸುರೇಶ ಇಟ್ನಾಳ

**ಬೆಳಗಾವಿ ವಾರ್ತೆ ಕೊಪ್ಪಳ :** ಕೊಪ್ಪಳ ಜಿಲ್ಲೆ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗವಾಗಿ ಕ್ಷೇತ್ರಕ್ಕೆ ಕ್ಷೇತ್ರದಲ್ಲಿ ಸ್ವಚ್ಛತೆ ಕಾಪಾಡಲು ಮತ್ತು ತುಂಗಭದ್ರ ಆಣೆಕಟ್ಟೆಯಿಂದ ನದಿಗೆ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಶ್ರೀಕ್ಷೇತ್ರದ ಸ್ವಚ್ಚತೆಗಾಗಿ ದೇವಸ್ಥಾನದ ವತಿಯಿಂದ ಹೆಚ್ಚುವರಿಯಾಗಿ 50 ಜನ ಸ್ವಚ್ಛತಾ ಸಿಬ್ಬಂದಿಗಳನ್ನು ತೆಗೆದುಕೊಳ್ಳಬೇಕು. ದೇವಸ್ಥಾನ ಗೋಪುರದಿಂದ ಮುದ್ದಮ್ಮನ ಕಟ್ಟೆಯವರೆಗೆ, ಮುದ್ದಮ್ಮನ ಕಟ್ಟೆಯಿಂದ ನಂದಿ ಸರ್ಕಲ್, ಟ್ಯಾಂಕ್ ಏರಿಯಾ, ನದಿ ತೀರದ ಹತ್ತಿರ, ದೇವಸ್ಥಾನದ ಒಳ ಆವರಣ ಮತ್ತು ಪಾರ್ಕಿಂಗ್ ಪ್ರದೇಶ ಹೀಗೆ ಒಂದೊಂದು ಏರಿಯಾಗಳನ್ನು ಹಂಚಿಕೆ ಮಾಡಿ ಸದರಿ ಏರಿಯಾಗಳ ಸ್ವಚ್ಛತೆಯ ಸಂಪೂರ್ಣ ಜವಾಬ್ದಾರಿಯನ್ನು ಪ್ರತಿಯೊಂದು ತಂಡಕ್ಕೆ ನೀಡಿ, ಹಸಿಕಸ ಮತ್ತು ಒಣಕಸವನ್ನು ಹೊಸಹಳ್ಳಿ ಕಸವಿಲೇವಾರಿ ಘಟಕಕ್ಕೆ ಕಳುಹಿಸಬೇಕು. ಯಾವುದೇ ರೀತಿಯ ರೋಗ ರುಜಿನಗಳು ಬರದಂತೆ ಮುಂಜಾಗ್ರತೆ ವಹಿಸಲು ಪ್ರತಿ ವರ್ಷದಂತೆ ಬ್ಲೀಚಿಂಗ ಪೌಡರ್, ಫಿನಾಯಿಲ್‌ಗಳನ್ನು ಖರೀದಿಸಿ, ಸಿಂಪಡಿಸಿ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ಕೊಡಿ. ಜಾತ್ರೆಯ ನಂತರ ಹುಲಿಗಿ ಗ್ರಾಮದ ಪ್ರಮುಖ ರಸ್ತೆಗಳು, ಶಾಲೆಗಳು, ಬಸ್ ನಿಲ್ದಾಣ ಮುಂತಾದ ಕಡೆ ಸ್ವಚ್ಚತೆಗೂ ಅಗತ್ಯ ಕ್ರಮ ಕೈಗೊಳ್ಳಲು ಕೊಪ್ಪಳ ನಗರಸಭೆ ವತಿಯಿಂದ ಸಕ್ಕಿಂಗ್ ಮಷಿನ್-1 ಸ್ವಚ್ಛತೆ ಮಾಡಲು ನಗರಸಭೆ ಅಧಿಕಾರಿಗಳು, ಮತ್ತು ಗ್ರಾಮ ಪಂಚಾಯತ ಅಧಿಕಾರಿಗಳು ಮೇಲ್ವಿಚಾರಣೆ ಮಾಡುವಂತೆ ಸೂಚಿಸಿದರು.

ಜಾತ್ರೆಯಲ್ಲಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಜಾತ್ರೆ ಪ್ರಾರಂಭವಾಗುವ ಪೂರ್ವದಲ್ಲಿ ಹಾಗೂ ಜಾತ್ರಾ ನಂತರ ಗ್ರಾಮದ ವ್ಯಾಪ್ತಿಗೆ ಬರುವ ಎಲ್ಲಾ ಚರಂಡಿಗಳನ್ನು ಗ್ರಾಮ ಪಂಚಾಯಿತಿ ಮತ್ತು ಮತ್ತು ದೇವಸ್ಥಾನದ ವ್ಯಾಪ್ತಿಗೆ ಬರುವ ಎಲ್ಲಾ ಚರಂಡಿಗಳನ್ನು ದೇವಸ್ಥಾನದ ವತಿಯಿಂದ ಸ್ವಚ್ಚಗೊಳಿಸಿ ಬ್ಲೀಚಿಂಗ್ ಪೌಡರ್ ಹಾಕಬೇಕು. ನೀರಿನ ಟ್ಯಾಂಕ್‌ಗಳಿಗೆ ಬ್ಲೀಚಿಂಗ್ ಪೌಡರ್ ಹಾಕಿ ಸ್ವಚ್ಚಗೊಳಿಸಲು ಮತ್ತು ಗ್ರಾಮದಲ್ಲಿ ಜಾತ್ರಾ ವೇಳೆ ಸೊಳ್ಳೆಗಳ ನಿಯಂತ್ರಣಕ್ಕಾಗಿ ನೀರು ನಿಲ್ಲದಂತೆ ಕ್ರಮ ಕೈಗೊಳ್ಳಲು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು, ಪ್ರಾ.ಅ.ಕೇ.,ಹುಲಿಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳು ಹಾಗೂ ಹುಲಿಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಇತ್ತೀಚೆಗೆ ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.

ಜಾತ್ರಾ ಸಮಯದಲ್ಲಿ ತುಂಗಭದ್ರ ಆಣೆಕಟ್ಟೆಯಿಂದ ನದಿಗೆ ನೀರು: ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಮೇ 10 ರಿಂದ ಮೇ 14ರ ವರೆಗೆ, ಈ ಅವಧಿಯಲ್ಲಿ ಜಾತ್ರೆಗೆ ಬರುವ ಲಕ್ಷಾಂತರ ಭಕ್ತಾದಿಗಳಿಗೆ ಕುಡಿಯುವ ನೀರಿನ ಅವಶ್ಯಕತೆ ಇದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಭಕ್ತರಿಗೆ ಅನಾನುಕೂಲವಾಗದಂತೆ ಪ್ರತಿ ವರ್ಷ ಕ್ರಮ ಕೈಗೊಳ್ಳುವಂತೆ, ಈ ವರ್ಷವು ಅದೇ ರೀತಿ ತುಂಗಭದ್ರ ಆಣೆಕಟ್ಟೆಯಿಂದ ನದಿಗೆ ನೀರು ಬಿಡಲು ನೀರಾವರಿ ಇಲಾಖೆ ಟಿ.ಬಿ. ಬೋರ್ಡ್ ಟಿ.ಬಿಡ್ಯಾಂ & ಮುನಿರಾ ಬಾದ್ ಡ್ಯಾಂನ ಮುಖ್ಯ ಕಾರ್ಯಪಾಲಕ ಅಭಿಯಂತರರು ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ಸೂಕ್ತ ಕ್ರಮ ವಹಿಸ ಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

# ಮಹರ್ಷಿ ಭಗೀರಥ ಜಯಂತಿ: ಪುಷ್ಪ ನಮನ ಸಲ್ಲಿಕೆ



**ಬೆಳಗಾವಿ ವಾರ್ತೆ ಕೊಪ್ಪಳ:** ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಹರ್ಷಿ ಭಗೀರಥ ಜಯಂತಿಯನ್ನು ಜಿಲ್ಲಾಡಳಿತ ಭವನದ ಕೆಸ್ವಾನ್-2ರ ಸಭಾಂಗಣದಲ್ಲಿ ಗುರುವಾರದಂದು ಸರಳವಾಗಿ ಆಚರಿಸಲಾಯಿತು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹಾಗೂ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಮಹರ್ಷಿ ಭಗೀರಥರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಕೊಪ್ಪಳ ಜಿಲ್ಲಾ ಭಗೀರಥ ಸಮಾಜದ ಅಧ್ಯಕ್ಷರಾದ ಯಲ್ಲಪ್ಪ ಷಣ್ಮುಖಪ್ಪ ಗದ್ದಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೆಂಕಟೇಶ, ತಾಲ್ಲೂಕು ಅಧ್ಯಕ್ಷರಾದ ನಾಗರಾಜ, ಉಪಾಧ್ಯಕ್ಷರಾದ ಹನುಮಂತಪ್ಪ ಬೆಣಕಲ್, ಸಮಾಜದ ಮುಖಂಡರಾದ ಮಲ್ಲಿಕಾರ್ಜುನ, ಹನುಮಪ್ಪ ಕಲಿಕೇರಿ, ಎಂಕಣ್ಣ ಹೆಚ್., ಲಕ್ಷ್ಮೀಕಾಂತ ನಾಲ್ವಾಡ, ನಾಗರಾಜ ಚಳ್ಳೂರು, ಹನುಮಂತಪ್ಪ ಕಲಕೇರಿ, ಯಮನಗೌಡ ಪೋ. ಪಾಟೀಲ, ಸಿದ್ದಪ್ಪ ಕವಲೂರು, ಬಸವರಾಜ, ಮಂಜುನಾಥ ಪಾಟೀಲ, ಶರಣಪ್ಪ ಹಟ್ಟಿ, ಗುದ್ನೆಪ್ಪ ಹೊಸೂರು, ಹೊನ್ನಪ್ಪ ಗೊಡೆಕಾರ್, ಹನುಮಂತಪ್ಪ ಕಟಗಿ, ನಿಂಗಪ್ಪ, ಬಾಲಾಜಿ, ಅಶೋಕ ಸಿಂಧೋಗಿ, ರಾಮಚಂದ್ರಪ್ಪ ಕವಲೂರು ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಬಿಜೆಪಿ ಮುಖಂಡ ವೆಂಕಿ ಕೊಲೆ ಪ್ರಕರಣ: ಆರೋಪಿಗಳಿಗೆ ಶಿಕ್ಷೆ ಕರಾರು



**ಬೆಳಗಾವಿ ವಾರ್ತೆ ಗಂಗಾವತಿ :** ಬಿಜೆಪಿ ಯುವ ಮೋರ್ಚಾದ ಅಧ್ಯಕ್ಷನಾಗಿದ್ದ ಕುರುಬರ ವೆಂಕಟೇಶ ಅಲಿಯಾಸ್ ಜೆಎನ್‌ಎನ್ ವೆಂಕಿ ಕೊಲೆ ಪ್ರಕರಣದಲ್ಲಿನ ಆರೋಪಿಗಳಿಗೆ ಇಲ್ಲಿನ ಹೆಚ್ಚುವರಿ ಜಿಲ್ಲಾ ನ್ಯಾಯಾಲಯವು ಶಿಕ್ಷೆ ಕಾರಾರು ಮಾಡಿ ಗುರುವಾರ ಆದೇಶ ಪ್ರಕಟಿಸಿದೆ.

2025ರ ಡಿಸೆಂಬರ್‌ನಲ್ಲಿ ನಡೆದಿದ್ದ ಕೊಲೆ ಪ್ರಕರಣದ ಮಹತ್ವದ ತೀರ್ಪು ಹೊರ ಬೀಳುವ ಹಿನ್ನೆಲೆ ಇಲ್ಲಿನ ಜಿಲ್ಲಾ ಹೆಚ್ಚುವರಿ ನ್ಯಾಯಾಲಯದ ಆವರಣದಲ್ಲಿ ಜನ ಕಿಕ್ಕಿರಿದು ತುಂಬಿದ್ದರು. ಪ್ರಕರಣ ಕೈಗೆತ್ತಿಕೊಂಡ ನ್ಯಾಯಾಧೀಶ ಸದಾನಂದ ನಾಗಪ್ಪ ನಾಯ್ಕ್ ಪ್ರಕರಣದಲ್ಲಿನ ಒಟ್ಟು 12 ಜನರ ಪೈಕಿ ಆರು ಜನರಿಗೆ ಶಿಕ್ಷೆ ಕರಾರು ಮಾಡಿದರು.

ಪ್ರಕರಣದಲ್ಲಿನ ಆರೋಪಿ ನಂಬರ್ 1 ಆಗಿರುವ ರವಿ ಪತ್ನಿ ಚೈತ್ರಾ ಸೇರಿದಂತೆ ಮಿಕ್ಕ ಆರು ಜನ ಆರೋಪಿಗಳನ್ನು ನಿರುಪರಾಧಿಗಳು ಎಂದು ಕೋರ್ಟ್ ತೀರ್ಪು ನೀಡಿದೆ. ಶಿಕ್ಷೆಯ ಪ್ರಮಾಣವನ್ನು ಏ.27ರಂದು ಪ್ರಕಟಿಸುವುದಾಗಿ ನ್ಯಾಯಾಧೀಶ ಪ್ರಕಟಿಸಿದರು.

## ಮುದ್ದೇಬಿಹಾಳದಲ್ಲಿ ಸರ್ವ ಸಮಾಜಗಳ ಸಹಯೋಗದೊಂದಿಗೆ
# ವಿಶ್ವಗುರು ಬಸವ ಜಯಂತಿ ಅದ್ದೂರಿ ಆಚರಣೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಹನ್ನೆರಡನೇ ಶತಮಾನದಲ್ಲಿಯೇ ಸಮಾನತೆಯ ಕ್ರಾಂತಿಕಾರಕ ವಿಚಾರಧಾರೆಗಳ ಮೂಲಕ ಸಮಾಜದಲ್ಲಿ ಬದಲಾವಣೆ ತಂದ ಮಹಾನ್ ಶರಣ ವಿಶ್ವಗುರು ಬಸವಣ್ಣನವರ ತತ್ವಾದರ್ಶಗಳನ್ನು ನಾವೆಲ್ಲರೂ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹುನಗುಂದ–ಮುದ್ದೇಬಿಹಾಳ ಹೊಸಮಠದ ಅಮರೇಶ್ವರ ದೇವರು ಕರೆ ನೀಡಿದರು.

ಪಟ್ಟಣದ ಕಿಲ್ಲಾದಲ್ಲಿರುವ ಹೊಸಮಠದ ಆವರಣದಲ್ಲಿ ವೀರಶೈವ ಲಿಂಗಾಯತ ಹಾಗೂ ಸರ್ವ ಸಮಾಜಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಬಸವಣ್ಣನವರ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಬಸವಣ್ಣನವರು ಕಟ್ಟಿಕೊಟ್ಟ ಸಮಾನತೆಯ ಹಾದಿ ಇಂದಿಗೂ ಪ್ರಸ್ತುತವಾಗಿದೆ ಎಂದರು.

ನಾಲತವಾಡದ ಉಪನ್ಯಾಸಕ ಡಿ.ಆರ್. ಮಳಖೇಡ ಹಾಗೂ ಹುನಗುಂದದ ಮುಖ್ಯಶಿಕ್ಷಕ ಪ್ರಭು ಮಾಲಗತ್ತಿಮಠ ಮಾತನಾಡಿ, ಅನುಭವ ಮಂಟಪದಲ್ಲಿ ಅಂದೇ ಮಹಿಳೆಯರಿಗೆ ಸಮಾನತೆ ನೀಡಲಾಗಿತ್ತು. ಆದರೆ ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಮಹಿಳಾ ಮೀಸಲಾತಿಗೆ ಒಮ್ಮತ ವ್ಯಕ್ತವಾಗದಿರುವುದು ಚಿಂತಿಸಬೇಕಾದ ಸಂಗತಿ ಎಂದರು.

**ಅದ್ದೂರಿ ಮೆರವಣಿಗೆ:**

ಕಿಲ್ಲಾದಿಂದ ಆರಂಭಗೊಂಡ ಮೆರವಣಿಗೆಯು ಸರಾಫ ಬಜಾರ್, ಮುಖ್ಯರಸ್ತೆ ಮೂಲಕ ಬಸವೇಶ್ವರ ವೃತ್ತ ತಲುಪಿತು. ಅಲ್ಲಿ ಅಶ್ವಾರೂಢ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು. ನಂತರ ಸಂಗೊಳ್ಳಿ ರಾಯಣ್ಣ ವೃತ್ತ, ಅಂಬೇಡ್ಕರ್ ವೃತ್ತ, ರಾಘವೇಂದ್ರ ಮಠ, ದ್ಯಾಮವ್ವನ ಕಟ್ಟೆ ಮೂಲಕ ಬ್ರಹ್ಮಲಿಂಗೇಶ್ವರ ದೇವಸ್ಥಾನ ತಲುಪಿ ಸಮಾಪ್ತಿಗೊಂಡಿತು.

ಈ ಸಂಭ್ರಮದಲ್ಲಿ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ, ಮುಖಂಡರಾದ ಸಿ.ಪಿ. ಸಜ್ಜನ, ಗುರು ತಾರನಾಳ, ಅಶೋಕ ಚೆಟ್ಟರ, ಸತೀಶ್ ಓಸ್ವಾಲ್,

ಬಿ.ವಿ. ಕೋರಿ, ಬಸವರಾಜ ನಾಲತವಾಡ, ಪ್ರಭು ಕಡಿ, ಬಾಪುಗೌಡ ಪಾಟೀಲ, ಬಿ.ಜಿ. ಇಟಗಿ, ಮುರಿಗೆಪ್ಪ ಮೋಟಗಿ, ಮಹಿಬೂಬ್ ಗೊಳಸಂಗಿ, ಜಗದೀಶ ಕಂಠಿ, ಕಾಮರಾಜ ಬಿರಾದಾರ, ವಾಯ್.ಎಚ್. ವಿಜಯಕರ, ಕುಮಾರಸ್ವಾಮಿ ಶಿವಯೋಗಿ ಮಠ, ದಾನಯ್ಯ ಹಿರೇಮಠ,ಗೋಪಿ ಮಡಿವಾಳರ, ಅಶೋಕ ನಾಡಗೌಡ, ರಾವಸಾಹೇಬ್ ದೇಸಾಯಿ, ಸಂಗಣ್ಣ ಕಟ್ಟಿ, ಶ್ರೀಕಾಂತ ಚಲವಾದಿ, ಸದ್ದಾಂ ಕುಂಟೋಜಿ, ರಫೀಕ್ ಶಿರೋಳ, ಕಾಶಿಬಾಯಿ ರಾಂಪೂರ,ಪ್ರೀತಿ ದೇಗಿನಾಳ, ಸಂಗಮ್ಮ ದೇವರಳ್ಳಿ, ಸರಸ್ವತಿ ಪೀರಾಪೂರ, ಸೇರಿದಂತೆ ವಿವಿಧ ಸಮಾಜ ಗಣ್ಯರು ಮತ್ತು ಸಾವಿರಾರು ಭಕ್ತಾದಿಗಳು ಪಾಲ್ಗೊಂಡಿದ್ದರು.

## ಜಿಲ್ಲಾಡಳಿತದಿಂದ ಆಯೋಜಿಸಿದ್ದ ಆದ್ಯ ಜಗದ್ಗುರು ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಿನ್ನೆ (ಏ.21) ಸಂಜೆ ಕರ್ನಾ ಟಕ ಕುಲಪುರೋಹಿತ ಆಲೂರ ವೆಂಕಟ ರಾವ ಸಾಂಸ್ಕೃತಿಕ ಭವನದಲ್ಲಿ ಆದ್ಯ ಜಗ ದ್ಗುರು ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮವನ್ನು ಆಯೋಜಿಸ ಲಾಗಿತ್ತು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಶ್ರೀ ಶಾರದಾ ಶಂಕರ ರಮಣ ಅದ್ವೈತ ಮಠದ ಪರಮಪೂಜ್ಯ ಶ್ರೀ ಶ್ರೀ ಶಿವಾನಂದ ಭಾರತಿ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಎಡಿಸಿ ಅವರಾದ ಗೀತಾ ಸಿ.ಡಿ. ಅವರು ಶ್ರೀ ಶಂಕರಾಚಾರ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ದೀಪ ಬೆಳಗಿಸುವುದರೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿದರು.



ಸಂಸ್ಕೃತ ಮಹಾವಿದ್ಯಾಲಯದ ಸಹ ಉಪನ್ಯಾಸಕ ವಿದ್ವಾನ್ ಸೂರ್ಯನಾರಾ ಯಣ ಭಟ್, ಅವರು ಶ್ರೀ ಶಂಕರಾಚಾ ರ್ಯರ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ಬ್ರಾಹ್ಮಣ ಸಮಾಜದ ಅಧ್ಯಕ್ಷ ಆರ್.ಡಿ. ಕಲುಕರ್ಣಿ, ಶಂಕರ ಕುಲಕರ್ಣಿ ಮತ್ತು ಸಮಾಜದ ಮುಖಂ ಡರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸಂಪನ್ಮೂಲ ಸಂಗ್ರಹ ಸಮಿತಿ– ಅಬಕಾರಿ ಸುಧಾರಣೆ ವರದಿ

**ಬೆಳಗಾವಿ ವಾರ್ತೆ ಧಾರವಾಡ:** ರಾಜ್ಯದ ಮದ್ಯ ಅಬಕಾರಿ ತೆರಿಗೆ ವ್ಯವಸ್ಥೆಯನ್ನು ಪರಿಶೀಲಿಸಲು ಕರ್ನಾಟಕ ಸರ್ಕಾರ ರಚಿಸಿದ್ದ ಸಂಪನ್ಮೂಲ ಸಂಗ್ರಹ ಸಮಿತಿ ವರದಿಯನ್ನು ಸಲ್ಲಿಸಿದೆ. ಈ ವರದಿಯು ಅಸ್ತಿತ್ವದಲ್ಲಿರುವ ಚೌಕಟ್ಟಿನ ಸಮಗ್ರ ಪರಿಶೀಲನೆಯನ್ನು ಪ್ರಸ್ತುತಪಡಿಸುತ್ತದೆ ಮತ್ತು ಸಾರ್ವಜನಿಕ ಆರೋಗ್ಯ ದೃಷ್ಟಿಕೋನ ಹೊಂದಿದೆ.

ಮದ್ಯದ ಅಂಶದ ಆಧಾರದ ಮೇಲೆ ತೆರಿಗೆ ವಿಧಿಸುವ ವ್ಯವಸ್ಥೆಗೆ ವರ್ಗಾವಣೆಯನ್ನು ಶಿಫಾರಸು ಮಾಡುತ್ತದೆ. ಇದಕ್ಕೆ ಹಂತ ಹಂತವಾಗಿ ಜಾರಿಗೊಳಿಸುವ ಸುಧಾರಣಾ ಮಾರ್ಗಸೂಚಿ ಹಾಗೂ ತಂತ್ರಜ್ಞಾನ ಆಧಾರಿತ ನಿಯಂತ್ರಣ ಕ್ರಮಗಳು ಬೆಂಬಲವಾಗಿವೆ.

ಈ ವರದಿಯನ್ನು ವ್ಯಾಪಕ ಪ್ರಚಾರ, ಸಮಾಲೋಚನೆಗಾಗಿ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ವೆಬ್‌ಸೈಟ್ (finance.karnataka.gov.in) ನಲ್ಲಿ ಲಭ್ಯವಾಗುವಂತೆ ಮಾಡಲಾಗಿದೆ.

ಉದ್ಯಮ ಕ್ಷೇತ್ರದ ಪ್ರತಿನಿಧಿಗಳು, ಸಾರ್ವಜನಿಕ ಆರೋಗ್ಯ ತಜ್ಞರು, ಶೈಕ್ಷಣಿಕ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಮತ್ತು ಸಾಮಾನ್ಯ ನಾಗರಿಕರು ಸೇರಿದಂತೆ ಎಲ್ಲಾ ಆಸಕ್ತ ಪಾಲುದಾರರು ವರದಿಯನ್ನು ಪರಿಶೀಲಿಸಿ, ತಮ್ಮ ಅಭಿಪ್ರಾಯವನ್ನು spobud-fd@karnataka.gov.in ಗೆ ಕಳುಹಿಸಬಹುದು.

ಪಾಲುದಾರರು ತಮ್ಮ ಅಭಿಪ್ರಾಯಗಳನ್ನು ಮೇ 22, 2026 ಸಂಜೆ 5:30 ಗಂಟೆಯೊಳಗೆ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಬಸವಣ್ಣನವರ ಆದರ್ಶಗಳು ಯುವ ಪೀಳಿಗೆಗೆ ದಾರಿ ದೀಪ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** 12ನೇ ಶತಮಾನದಲ್ಲೇ ಬಸವಣ್ಣನವರು ಮೌಢ್ಯಗಳ ವಿರುದ್ಧ ಕ್ರಾಂತಿ ಮಾಡಿದರು. ಇಂದು ನಾವು ಕೂಡ ಅವರ ಹಾದಿಯಲ್ಲಿ ಸಾಗಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು ಎಂದು ತಾಲ್ಲೂಕು ಭೋವಿ (ವಡ್ಡರ) ಸಮಾಜ ಸೇವಾ ಸಂಘದ ಅಧ್ಯಕ್ಷರಾದ ಯಮನಪ್ಪ ವಡ್ಡರ ಕರೆ ನೀಡಿದರು.

ತಾಲ್ಲೂಕಿನ ಇಣಚಗಲ್ಲ ಗ್ರಾಮದ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಸ್ಥಾನದಲ್ಲಿ ಬುಧವಾರ (ದಿನಾಂಕ 22/4/26) ನಡೆದ ಜಾತ್ರಾ ಮಹೋತ್ಸವದ ಅಂಗವಾಗಿ, ಅಖಿಲ ಕರ್ನಾಟಕ ಭೋವಿ ವಡ್ಡರ ಯುವ ವೇದಿಕೆ (ರಿ)–ಕ್ರಾಂತಿ ವತಿಯಿಂದ ಆಯೋಜಿಸಲಾಗಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಮಹಾನ್ ಪುರುಷರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, "ಜಾತಿ–ಧರ್ಮಗಳ ಭೇದವನ್ನು ಮರೆತು ಮನುಷ್ಯ ಧರ್ಮವನ್ನು ಎತ್ತಿ ಹಿಡಿಯುವುದೇ ನಿಜವಾದ ಜಯಂತಿ ಆಚರಣೆಯ ಮೂಲ ಉದ್ದೇಶವಾಗಿದೆ. ಬಸವಣ್ಣನವರ ವಿಚಾರಧಾರೆಗಳು ಕೇವಲ ಭಾಷಣಕ್ಕೆ ಸೀಮಿತವಾಗದೆ, ಯುವ ಪೀಳಿಗೆಯ ಜೀವನಕ್ಕೆ ದಾರಿದೀಪವಾಗಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ತಾಲ್ಲೂಕು ಉಪಾಧ್ಯಕ್ಷ ಹಣಮಂತ ಯ. ಭೈರವಾಡಗಿ, ಹೊನ್ನಪ್ಪ ದೊಡ್ಡಮನಿ, ನಾಗರಾಜ ಭೈರವಾಡಗಿ, ದುರ್ಗಪ್ಪ ದೊಡ್ಡಮನಿ, ರಾಜು ಬೈರವಾಡಗಿ, ಶಿವರಾಜ ಭೈರವಾಡಗಿ, ಕಾಶಪ್ಪ ಭೈರವಾಡಗಿ, ಯಶವಂತ ಕುಮಟಗಿ, ಶಿವರಾಜ್ ಟಕ್ಕಳಕಿ, ಲಕ್ಷ್ಮಣ ಭೈರವಾಡಗಿ, ಮುರಗೆಪ್ಪ ಟಕ್ಕಳಕಿ, ಶ್ರೀಕಾಂತ ಭೈರವಾಡಗಿ, ಮುತ್ತು ಕವಡಿಮಟ್ಟಿ, ಪರಶುರಾಮ ಟಕ್ಕಳಕಿ, ಬಾಬುರಾವ ಭೈರವಾಡಗಿ, ಗಣೇಶ ಕುಮಟಗಿ, ಪರಶುರಾಮ ಭೈರವಾಡಗಿ, ಕೃಷ್ಣಾ ಸೋಮನಾಳ, ಉದಯ ಭೈರವಾಡಗಿ, ಆನಂದ ದೊಡ್ಡಮನಿ, ಶಿವು ದೊಡ್ಡಮನಿ, ಪ್ರಶಾಂತ್ ಭೈರವಾಡಗಿ, ಸಂದೀಪ್ ನಂದಿಹಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಉದ್ಘಾಟನಾ ಸಮಾರಂಭ



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಹೊಸದಾಗಿ ಮಧ್ಯಸ್ಥಿಕೆಗಾರರಾಗಿ ಕಾರ್ಯನಿರ್ವಹಿಸಲು ಹೊಸದಾಗಿ ನಿಯೋಜನೆ ಮಾಡಿಕೊಂಡ 50 ಜನ ಮದ್ಯಸ್ಥಿಕೆಗಾರರಿಗೆ ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಹಾಗೂ ಧಾರವಾಡ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ 05 ದಿನಗಳ ತರಬೇತಿ ಕಾರ್ಯಾಗಾರದ ಉದ್ಘಾಟನಾ ಕಾರ್ಯಕ್ರಮವನ್ನು ಜಿಲ್ಲಾ ನ್ಯಾಯ?ಲಯದ ಸಂಕೀರ್ಣದಲ್ಲಿ ಆಯೋಜಿಸಲಾಗಿತ್ತು.

ಜಿಲ್ಲಾ ಮತ್ತು ಸತ್ರ ನ್ಯಾಯ?ಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರಾಜಕುಮಾರ ಸಿ. (ಪ್ರಭಾರ) ಪ್ರಧಾನ, ಅವರು ಕಾರ್ಯ?ಗಾರದ ಉದ್ಘಾಟನೆಯನ್ನು ಮಾಡಿದರು. ಮಧ್ಯಸ್ಥಿಕೆಗಾರರನ್ನು ಉದ್ದೇಶಿಸಿ ಮಾತನಾಡುತ್ತಾ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ರಾಜಿ ಸಂಧಾನದ ಪ್ರಕ್ರಿಯೆಯಲ್ಲಿ ಮಧ್ಯಸ್ಥಿಕೆಯು ತುಂಬಾ ಅತ್ಯಮೂಲ್ಯವಾದ ಹಂತವಾಗಿದೆ ಹಾಗೂ ಈ ಮಧ್ಯಸ್ಥಿಕೆಯ ಪ್ರಕ್ರಿಯೆಯಲ್ಲಿ ಮಧ್ಯಸ್ಥಿಕೆಗಾರರ ಪಾತ್ರ ಅತ್ಯಮೂಲ್ಯವಾದದ್ದು. ಆದ್ದರಿಂದ, ಈ ತರಬೇತಿ ಕಾರ್ಯಾಗಾರದ ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೌರವಾನ್ವಿತ ಸುವರ್ಣಾ ಕೆ. ಮಿರ್ಜಿ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ಅಧ್ಯಕ್ಷರು, ಖಾಯಂ ಜನತಾ ನ್ಯಾಯಾಲಯ, ಧಾರವಾಡ ಇವರು ವಹಿಸಿದ್ದರು.

ಅತಿಥಿಗಳಾಗಿ ಜಿಲ್ಲಾ ನ್ಯಾಯಾಧೀಶರಾದ ಗೌರವಾನ್ವಿತ ಎ.ಕೆ.ನಾಗರಾಜಪ್ಪ, ಗೌರವಾನ್ವಿತ ಜರೀನಾ, ಗೌರವಾನ್ವಿತ ಪೂರ್ಣಿಮಾ ಎನ್.ಪೈ. ಕರ್ನಾಟಕ ವಕೀಲರ ಪರಿಷತ್ತಿನ ಅಧ್ಯಕ್ಷರಾದ ವಿ.ಡಿ.ಕಾಮರೆಡ್ಡಿ, ಕರ್ನಾಟಕ ವಕೀಲರ ಪರಿಷತ್ತಿನ ಪೂರ್ವ ಅಧ್ಯಕ್ಷರು ಹಾಗೂ ಸದಸ್ಯರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆನಂದಕುಮಾರ ಎ ಮಗದುಮ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಧಿಕಾರೇತರ ಸದಸ್ಯರಾದ ಕೆ.ಎಲ್.ಪಾಟೀಲ, ಧಾರವಾಡ ವಕೀಲರ ಸಂಘದ ಅಧಕ್ಷರಾದ ಅಶೋಕ ವಿ ಏಣಗಿ ಹಾಗೂ ಮಧ್ಯಸ್ಥಿಕೆ ತರಬೇತಿದಾರರಾದ ಶೋಭಾ ಪಾಟೀಲ ಹಾಗೂ ಲಕ್ಷ್ಮೀಶರಾವ್ ಇವರು ಭಾಗವಹಿಸಿದ್ದರು.

## ಶ್ರೀ ಬಸವೇಶ್ವರ ಜಯಂತ್ಯೋತ್ಸವ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ಸಮಾನತೆಯ ಹರಿಕಾರ ಕಾಯಕವೇ ಕೈಲಾಸ ಎಂಬ ಉನ್ನತ ಆದರ್ಶ ತತ್ವ ಮೂಲಕ ಇಡೀ ಜಗತ್ತಿಗೆ ಬೆಳಕಾದ ಮಾನವತಾವಾದಿ ಜಗಜ್ಯೋತಿ ಬಸವೇಶ್ವರ ಅವರ ವಿಚಾರಧಾರೆಗಳು ಸಾರ್ವಕಾಲಿಕವಾಗಿವೆ ಎಂದು ಭಾರತ ಜೋಡೋ ಐಕ್ಯತೆ ಪಾದಯಾತ್ರೆ ಬರಿಗಾಲಿನ ರಾಜ್ಯ ಸಂಚಾಲಕರು ಎಸ್‌ಎಸ್ ಲಕ್ಷ್ಮೇಶ್ವರ ಹೇಳಿದರು.

ಅವರು ಲಕ್ಷ್ಮೇಶ್ವರದಲ್ಲಿ ಬಸವ ತತ್ವ ಅಭಿಮಾನಿಗಳ ವೇದಿಕೆಸಂಯೋಗದಲ್ಲಿ ನಡೆದ ಜಗಜ್ಯೋತಿ ಬಸವೇಶ್ವರ ಜಯಂತೋತ್ಸವದಲ್ಲಿ ಮಾತನಾಡಿದರು. ಕಳೆದ 12ನೇ ಶತಮಾನದಲ್ಲಿ ತುಳಿತಕ್ಕೆ ಒಳಗಾದವರ ಪರ ನಿಷ್ಠೆಯಿಂದ ಧ್ವನಿಯಾಗಿ ನಿಂತ ಬಸವಣ್ಣವರ ತತ್ವ ಆದರ್ಶಗಳೇ ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಮಾಜಕವಾಗಿ ಅಡಿಪಾಯವಾಗಿವೆ ಎಂದರು ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿಗಳ ಬಳಗ ಅಧ್ಯಕ್ಷರು ಬಸುರಾಜ್ ಹಿರೇಮನಿ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿಗಳ ಬಳಗದ ಉಪಾಧ್ಯಕ್ಷರು ಸುರೇಶ್ ಎಂ ಹಟ್ಟಿ ಮಾತನಾಡಿದರು.

ಎಸ್. ಎಚ್ ವಡ್ಡರ್, ಮಾಂತೇಶ್ ಗುಡಿಸಿಲಮನಿ, ಹನುಮಂತಪ್ಪ ವಡ್ಡರ್, ಎಸ್ ಎಚ್. ವಡ್ಡರ್ ಮುಂತಾದವರು ಪಾಲ್ಗೊಂಡಿದ್ದರು.

## ಬೆಳಗಾವಿಯಲ್ಲಿ ಅಕ್ರಮ ಕಟ್ಟಡದ ವಿರುದ್ಧ ಜೆಸಿಬಿ ಕಾರ್ಯಾಚರಣೆ



**ಬೆಳಗಾವಿ ವಾರ್ತೆ ಬೆಳಗಾವಿ:** ನಗರದ ಮಾರುತಿ ಗಲ್ಲಿಯಲ್ಲಿ ನಿಯಮ ಉಲ್ಲಂಘಿಸಿ ನಿರ್ಮಿಸಲಾಗಿದೆ ಎಂದು ಗುರುತಿಸಲಾದ ನಾಲ್ಕಂತಸ್ತಿನ ಕಟ್ಟಡದ ಮೇಲೆ ಮಹಾನಗರ ಪಾಲಿಕೆ ಅಧಿಕಾರಿಗಳು ಜೆಸಿಬಿಗಳ ಮೂಲಕ ಭಾಗಶಃ ತೆರವು ಕಾರ್ಯಾಚರಣೆ ನಡೆಸಿದರು. ನಗರದ ಹೃದಯಭಾಗದಲ್ಲೇ ನಡೆದ ಈ ಕ್ರಮ ಸಾರ್ವಜನಿಕರಲ್ಲಿ ಕುತೂಹಲಕ್ಕೆ ಕಾರಣವಾಯಿತು. ಈ ಕಾರ್ಯಾಚರಣೆ ಅಕ್ರಮ ಕಟ್ಟಡಗಳ ವಿರುದ್ಧ ಪಾಲಿಕೆ ಕಠಿಣ ಕ್ರಮ ಕೈಗೊಳ್ಳುತ್ತಿದೆ ಎಂಬ ಸಂದೇಶ ನೀಡಿದಂತಾಗಿದೆ. ಆದರೆ ಕಟ್ಟಡದ ಬಾಡಿಗೆದಾರ ಯುನುಸ್ ಜಮಾದಾರ್ ಯಾವುದೇ ಪೂರ್ವ ನೋಟಿಸ್ ನೀಡದೇ ಏಕಾಏಕಿ ತೆರವು ಕಾರ್ಯಾಚರಣೆ ನಡೆಸಲಾಗಿದೆ ಎಂದು ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಂಗಡಿಯಲ್ಲಿದ್ದ ವಸ್ತುಗಳನ್ನು ಹೊರತೆಗೆದುಕೊಳ್ಳಲು ಸಮಯ ಕೊಡದೆ ಲಕ್ಷಾಂತರ ರೂ. ನಷ್ಟ ಉಂಟಾಗಿದೆ ಎಂದು ಅವರು ದೂರಿದ್ದಾರೆ.

ಇದರ ಜೊತೆಗೆ ಕಟ್ಟಡಕ್ಕೆ ಸಂಬಂಧಿಸಿದಂತೆ ನಕಲಿ ದಾಖಲೆಗಳ ಬಳಕೆ ನಡೆದಿದೆ ಎಂಬ ಆರೋಪಗಳು ಕೇಳಿಬಂದಿದ್ದು, ಅನುಮತಿ ಪ್ರಕ್ರಿಯೆಯಲ್ಲಿ ನಿರ್ಲಕ್ಷ್ಯವಿತ್ತೇ ಎಂಬ ಪ್ರಶ್ನೆಗಳು ಉದ್ಭವಿಸಿವೆ. ಮಹಾನಗರ ಪಾಲಿಕೆಯ ಅಧಿಕೃತ ಪ್ರತಿಕ್ರಿಯೆ ಇನ್ನೂ ಲಭ್ಯವಾಗಿಲ್ಲ.

## SSLC 2026: ಅಥಣಿಯ ಪ್ರಾರ್ಥನಾ 625/625 – ರಾಜ್ಯ ಟಾಪರ್!

**ಬೆಳಗಾವಿ ವಾರ್ತೆ ಬೆಳಗಾವಿ:** 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕಟಗೇರಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ನಾಗಪ್ಪ ಬಿರಾದರ್ ಪಾಟೀಲ್ ಅಪೂರ್ವ ಸಾಧನೆ ಮಾಡಿದ್ದಾರೆ. ಅವರು 625ಕ್ಕೆ 625 ಅಂಕಗಳನ್ನು ಗಳಿಸಿ ರಾಜ್ಯ ಮಟ್ಟದಲ್ಲಿ ಟಾಪರ್ ಸ್ಥಾನ ಪಡೆದಿದ್ದಾರೆ.

**ಗ್ರಾಮೀಣ ಪ್ರದೇಶದಿಂದ ರಾಜ್ಯ ಮಟ್ಟದ ಸಾಧನೆ :** ಅಪ್ಪಟ ಗ್ರಾಮೀಣ ಹಿನ್ನೆಲೆಯಿಂದ ಬಂದಿರುವ ಪ್ರಾರ್ಥನಾ ಈ ಸಾಧನೆ ಮೂಲಕ ಬೆಳಗಾವಿ ಜಿಲ್ಲೆಗೆ ಹೆಮ್ಮೆ ತಂದಿದ್ದಾರೆ. ಎಲ್ಲಾ ವಿಷಯಗಳಲ್ಲಿ ಶೇ.100 ಅಂಕಗಳನ್ನು ಪಡೆದು ತಮ್ಮ ಪ್ರತಿಭೆಯನ್ನು ಸಾಬೀತುಪಡಿಸಿದ್ದಾರೆ.

**ಕುಟುಂಬದ ಬೆಂಬಲ :** ಪ್ರಾರ್ಥನಾ ಅವರ ತಂದೆ ನಾಗಪ್ಪ ಅವರು ಅದೇ ಶಾಲೆಯಲ್ಲಿ ಕನ್ನಡ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ತಾಯಿ ವಿನೋದಾ ಗೃಹಿಣಿಯಾಗಿದ್ದು, ಕುಟುಂಬದ ಬೆಂಬಲವೇ ಈ ಸಾಧನೆಗೆ ಪ್ರಮುಖ ಕಾರಣವಾಗಿದೆ ಎಂದು ಹೇಳಲಾಗಿದೆ.

**ಜಿಲ್ಲೆಯ ಫಲಿತಾಂಶ – ಗಮನಾರ್ಹ ಏರಿಕೆ :** ಪ್ರಸಕ್ತ ವರ್ಷ ಬೆಳಗಾವಿ ಶೈಕ್ಷಣಿಕ ಜಿಲ್ಲೆಗೆ ಶೇ.94.75ರಷ್ಟು ಫಲಿತಾಂಶ ದೊರೆತಿದ್ದು, ರಾಜ್ಯದಲ್ಲಿ 18ನೇ ಸ್ಥಾನ



ಪಡೆದಿದೆ. ಕಳೆದ ವರ್ಷ ಶೇ.80.48ರಷ್ಟು ಫಲಿತಾಂಶವಿದ್ದು, ಈ ಬಾರಿ ಶೇ.14.27ರಷ್ಟು ಹೆಚ್ಚಳ ಕಂಡುಬಂದಿದೆ. ಇದೇ ರೀತಿ ಚಿಕ್ಕೋಡಿ ಶಿಕ್ಷಣ ಜಿಲ್ಲೆ ಶೇ.94.04 ಫಲಿತಾಂಶದೊಂದಿಗೆ 23ನೇ ಸ್ಥಾನ ಪಡೆದಿದ್ದು, ಕಳೆದ ವರ್ಷದಿಗಿಂತ ಶೇ.14.15ರಷ್ಟು ಏರಿಕೆ ಕಂಡಿದೆ.

**ಸಂಭ್ರಮದ ವಾತಾವರಣ :** ಫಲಿತಾಂಶ ಪ್ರಕಟವಾದ ನಂತರ ಶಾಲೆ ಮತ್ತು ಗ್ರಾಮದಲ್ಲಿ ಸಂಭ್ರಮದ ವಾತಾವರಣ ನಿರ್ಮಾಣವಾಗಿದೆ. ಶಿಕ್ಷಕರು, ಪೋಷಕರು ಮತ್ತು ಗ್ರಾಮಸ್ಥರು ಪ್ರಾರ್ಥನಾ ಸಾಧನೆಯನ್ನು ಶ್ಲಾಘಿಸಿದ್ದಾರೆ.

ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗ್ರಾಮೀಣ ವಿದ್ಯಾರ್ಥಿಗಳ ಸಾಧನೆ ವಿಶೇಷವಾಗಿ ಗಮನ ಸೆಳೆಯುತ್ತಿದ್ದು, ಪ್ರಾರ್ಥನಾ ಸೇರಿದಂತೆ ಹಲವರು ರಾಜ್ಯ ಮಟ್ಟದಲ್ಲಿ ಅಗ್ರ ಸ್ಥಾನಗಳನ್ನು ಪಡೆದುಕೊಂಡಿದ್ದಾರೆ.

## ಪ್ರವಚನ ಉದ್ಘಾಟನೆ



**ಬೆಳಗಾವಿ ವಾರ್ತೆ ಮುನವಳ್ಳಿ:** ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ರಜತಮಹೋತ್ಸವದ ಅಂಗವಾಗಿ ಪ್ರವಚನ ಪ್ರಾರಂಭೋತ್ಸವ ಸಮಾರಂಭ ಜರುಗಿತು. ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು ಸಾನಿಧ್ಯವಹಿಸಿ ಉದ್ಘಾಟಿಸಿದರು. ಪುರಸಭೆ ಅಧ್ಯಕ್ಷ ಈಶ್ವರ ಕರಿಕಟ್ಟಿ ಮಾತನಾಡಿದರು. ಅಥಿತಿಗಳಾಗಿ ಪುರಸಭೆ ಮುಖ್ಯಾಧಿಕಾರಿ ಎಮ್ ಎಮ್ ತಿಮ್ಮಾಣಿ, ಪತ್ರಕರ್ತ ಟಿ.ಎನ್.ಮುರಂಕರ ಆಗಮಿಸಿದ್ದರು. ಸ್ವಾಗತ ಶಿಕ್ಷಕ ಭವಾನಿ ಖೊಂದುನಾಯಕ, ಕಾ.ನಿರೂಪಣೆ ಬಾಳು ಹೊಸಮನಿ, ದೇವಸ್ಥಾನಕ್ಕೆ ಸಹಾಯ ಸಹಕರಾರ ನೀಡಿದ ಭಕ್ತರಿಗೆ ಸನ್ಮಾನಿಸಿ ಗೌರವಿಸಿದರು. ಕಾರ್ಯಕ್ರಮದ ಮುಂಚೆ ಬೆಳಗ್ಗೆ ಶ್ರೀ ಪಂಚಲಿಂಗೇಶ್ವರ ದೇವಸ್ಥಾನದಿಂದ ನೂತನ ಕಳಸ, ನಾಗದೇವತೆ, ಸಾಯಿಬಾಬಾರ ಬಾವಚಿತ್ರ ಭವ್ಯ ಮೇರವಣಿಗೆಗೆ ಶ್ರೀ ಮುರುಘೇಂದ್ರ ಶ್ರೀಗಳು, ಮುಕ್ತಾನಂದ ಶ್ರೀಗಳು ಹಾಗೂ ಶ್ರೀ ಗುರು ಹರಿದಾಸ ರಾಮಬಾವು ಬೋರಾಟೆ ಚಾಲನೆ ನೀಡಿದರು. ಶ್ರೀ ಜ್ಞಾನೇಶ್ವರ ಮಹಾರಾಜ ದಿವ್ಯ ಅಶ್ವಗಳ ರಿಂಗಣ ಸೇವೆ, ವಿವಿಧ ಜಾನಪದ ಕಲಾ ತಂಡಗಳು ಮೆರವಣಿಗೆಗೆ ಆಕರ್ಷಕ ವಾಗಿದ್ದವು. ಕುಂಭ ಹಾಗೂ ಆರ್ತಿ ಹೊತ್ತ ಮಹಿಳೆಯರು ಇದ್ದರು.

# ‘ಸಮಗ್ರ ಜಲ ಸಂಪನ್ಮೂಲ ನಿರ್ವಹಣೆ ಕುರಿತು ಮೂವತ್ತು ದಿನಗಳ ಕಡ್ಡಾಯ ತರಬೇತಿ’



**ಬೆಳಗಾವಿ ವಾರ್ತೆ ಧಾರವಾಡ:** ದಿನಾಂಕ: 22–04–2026 ರಂದು ಜಲ ಸಂಪನ್ಮೂಲ ಇಲಾಖೆಯಲ್ಲಿ ಹೊಸದಾಗಿ ನೇಮಕ ಗೊಂಡಿರುವ ಅಭಿಯಂತರರುಗಳಿಗೆ ‘ಸಮಗ್ರ ಜಲ ಸಂಪನ್ಮೂಲ ನಿರ್ವಹಣೆ ಕುರಿತು ಮೂವತ್ತು ದಿನಗಳ ಕಡ್ಡಾಯ ತರಬೇತಿ’ ಕಾರ್ಯಕ್ರಮದ ಉದ್ಘಾಟನೆ ಯನ್ನು ಪ್ರೊ. ಡಾ. ಸುರೇಶ ವಿ. ನಾಡಗೌ ಡರ, ಉಪ ಕುಲಪತಿಗಳು, ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ, ಗದಗ ರವರು ನೆರವೇರಿಸಿ ಮಾತನಾಡುತ್ತಾ, ಗ್ರಾಮೀಣಾಭಿವೃದ್ಧಿ ಇಲಾಖೆ ಮತ್ತು ಜಲ ಸಂಪನ್ಮೂಲ ಇಲಾಖೆಗೆ ನೇರ ಸಂಬಂಧವಿದ್ದು, ಪ್ರತಿಯೊಬ್ಬ ಅಭಿಯಂತರರು ಇಲಾಖೆಯಿಂದ ನೀಡಲಾಗುವ ತರಬೇತಿಗಳಿಂದ ಜ್ಞಾನ, ಕೌಶಲ್ಯ ಅಭಿವೃದ್ಧಿಪಡಿಸಿಕೊಂಡು ಸಮರ್ಪಕ ನೀರಾವರಿ ಯೋಜನೆ ಅನುಷ್ಠಾನಗೊಳಿಸುತ್ತಾ ತಮಗೆ ವಹಿಸಿದ ಕರ್ತವ್ಯಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು ಎಂದು ತಿಳಿಸಿದರು. ತಮ್ಮ ವ್ಯಾಪ್ತಿಯಡಿ ಬರುವ ನೀರು ಬಳಕೆದಾರರ ಸಹಕಾರ ಸಂಘಗಳನ್ನು ಸ್ವಇಚ್ಚೆಯಿಂದ ಬಲವರ್ಧನೆಗೊಳಿಸಲು ಮುಂದಾಗಬೇಕೆಂದು ಕರೆ ನೀಡಿದರು.

ಡಾ. ಗಿರೀಶ್ ಎನ್. ಮರಡ್ಡಿ, ನಿರ್ದೇಶಕರು, ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ), ಧಾರವಾಡ ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ವಾಲ್ಮಿ ಸಂಸ್ಥೆಯಿಂದ ಹೊಸದಾಗಿ ನೇಮಕಗೊಂಡ ಇಲಾಖಾ ಅಭಿಯಂತರರುಗಳಿಗೆ 30 ದಿನಗಳ ಕಡ್ಡಾಯ ತರಬೇತಿಯನ್ನು ವ್ಯವಸ್ಥಿತವಾಗಿ ರಚನೆ ಮಾಡಿದ್ದು, ಅಭಿಯಂತರರು ಕಛೇರಿ ನಿರ್ವಹಣೆ, ನೀರು ನಿರ್ವಹಣೆ, ವಾರಾಬಂದಿ ಪದ್ಧತಿ, ಭೂಸ್ವಾಧೀನ ಪ್ರಕ್ರಿಯೆ ಮತ್ತು ಕೋರ್ಟ ಪ್ರಕರಣಗಳ ನಿರ್ವಹಣೆ, ನೀರಾವರಿ ಮತ್ತು ಸಹಕಾರ ಕಾಯ್ದೆ, ಅಧಿನಿಯಮಗಳು, ಆಣೆಕಟ್ಟು ನಿರ್ವಹಣೆ, ಟೆಂಡರ್ ಪ್ರಕ್ರಿಯೆ ಹಾಗೂ ವ್ಯಕ್ತಿತ್ವ ವಿಕಸನ ಸಮಗ್ರ ವಿಷಯಗಳ ಕುರಿತು ನುರಿತ ಅನುಭವಿ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುತ್ತದೆ. ಇದರ ಸದುಪಯೋಗ ಪಡಿಸಿಕೊಂಡ ಇಲಾಖೆಯ ಕಾರ್ಯಗಳನ್ನು ದಕ್ಷತೆಯಿಂದ ನಿರ್ವಹಿಸುವ ವ್ಯಕ್ತಿಯಾಗಿ ಹೊರಹೊಮ್ಮುವಂತೆ ಉತ್ತೇಜನ ನೀಡಿದರು.


ಇಂ. ಬಿ. ವೈ. ಬಂಡಿವಡ್ಡರ, ಪ್ರಾಧ್ಯಾಪಕರು ಹಾಗೂ ಕಾರ್ಯಕ್ರಮ ಸಂಯೋಜಕರು ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ, ಜಲ ಸಂಪನ್ಮೂಲ ಇಲಾಖೆಯಿಂದ ಹೊಸದಾಗಿ ನೇಮಕಗೊಂಡ ಅಭಿಯಂತರರು ಕಡ್ಡಾಯವಾಗಿ ವಾಲ್ಮಿ ಸಂಸ್ಥೆಯಲ್ಲಿ 30 ದಿನಗಳ ತರಬೇತಿ ಪಡೆಯಬೇಕು. ಸಂಸ್ಥೆಯಲ್ಲಿ ನಿಯಮಗಳನ್ನು ಪಾಲಿಸಿ, ಪ್ರಯೋಜನವನ್ನು ಪಡೆದು ನುರಿತ ಅಭಿಯಂತರರಾಗಬೇಕು ಎಂದು ತಿಳಿಸಿದರು.

ಸಂಸ್ಥೆಯ ಸಹ ಪ್ರಾಧ್ಯಾಪಕರು ಹಾಗೂ ಕಾರ್ಯಕ್ರಮದ ಸಹ ಸಂಯೋಜರುಗಳಾದ ಇಂ. ಪ್ರಕಾಶ ಕಾತರಕಿ ಮತ್ತು ಇಂ. ಸದಾಶಿವ ರವರು ಉಪಸ್ಥಿತರಿದ್ದರು.

ಇಂ. ಪ್ರದೀಪ ದೇವರಮನಿ, ಸಹ ಪ್ರಾಧ್ಯಾಪಕರು ವಾಲ್ಮಿ, ಧಾರವಾಡ ಇವರು ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರನ್ನು ಸ್ವಾಗತಿಸಿದರು, ಇಂ. ಅನಿಲಕುಮಾರ ಎನ್. ಮಸಳಿ, ಸಹ ಪ್ರಾಧ್ಯಾಪಕರು, ವಾಲ್ಮಿ, ಧಾರವಾಡ ಇವರು ವಂದಿಸಿದರು. ಶ್ರೀಮತಿ ಅನುರಾಧಾ ಮಳಗಿ ಇವರು ಕಾರ್ಯಕ್ರಮ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ 60 ಅಭಿಯಂತರರು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

# ಜಿಲ್ಲಾಡಳಿತದಿಂದ ಆಯೋಜಿಸಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಏಪ್ರೀಲ್ 20, 2026 ರಂದು ಸಂಜೆ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅವರು ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ದೀಪ ಬೆಳಗಿಸುವುದರೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಕಾನೂನು ತಜ್ಞರು ಹಾಗೂ ಚಿಂತಕಡಾ. ಲೋಹಿತ ಡಿ. ನಾಯ್ಕರ, ಅವರು ಶ್ರೀ ಬಸವೇಶ್ವರರು ಮತ್ತು ಮಾನವ ಹಕ್ಕುಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ದರ್ಗಾ, ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ರಂಜಾನ, ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ. ವೀರಣ್ಣ ರಾಜೂರ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ, ಎ.ಸಿ.ಪಿ. ಪ್ರಶಾಂತ ಸಿದ್ಧನಗೌಡರ, ಸಮಾಜದ ಮುಖಂಡರು ಹಾಗೂ ಇನ್ನಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಧಾರವಾಡ: ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಏ.23 ರಂದು ಬೆಳಿಗ್ಗೆ ಕೆಸಿಡಿ ಕಾಲೇಜಿನ ಸಿಇಟಿ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲಿಸಿದರು.

# ಮಧ್ಯಸ್ಥಿಕೆಗಾರರ 05 ದಿನಗಳ ತರಬೇತಿ ಕಾರ್ಯಾಗಾರದ ಉದ್ಘಾಟನಾ ಸಮಾರಂಭ

**ಬೆಳಗಾವಿ ವಾರ್ತೆ ಧಾರವಾಡ :** ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಹೊಸದಾಗಿ ಮಧ್ಯಸ್ಥಿಕೆಗಾರರಾಗಿ ಕಾರ್ಯನಿರ್ವಹಿಸಲು ಹೊಸದಾಗಿ ನಿಯೋಜನೆ ಮಾಡಿಕೊಂಡ 50 ಜನ ಮಧ್ಯಸ್ಥಿಕೆಗಾರರಿಗೆ ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡ ಹಾಗೂ ಧಾರವಾಡ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ 05 ದಿನಗಳ ತರಬೇತಿ ಕಾರ್ಯಾಗಾರದ ಉದ್ಘಾಟನಾ ಕಾರ್ಯಕ್ರಮವನ್ನು ಜಿಲ್ಲಾ ನ್ಯಾಯಾಲಯದ ಸಂಕೀರ್ಣದಲ್ಲಿ ಆಯೋಜಿಸಲಾಗಿತ್ತು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರಾಜಕುಮಾರ ಸಿ. (ಪ್ರಭಾರ) ಪ್ರಧಾನ, ಅವರು ಕಾರ್ಯಾಗಾರದ ಉದ್ಘಾಟನೆಯನ್ನು ಮಾಡಿದರು. ಮಧ್ಯಸ್ಥಿಕೆಗಾರರನ್ನು ಉದ್ದೇಶಿಸಿ ಮಾತನಾಡುತ್ತಾ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ರಾಜಿ ಸಂಧಾನದ ಪ್ರಕ್ರಿಯೆಯಲ್ಲಿ ಮಧ್ಯಸ್ಥಿಕೆಯು ತುಂಬಾ ಅತ್ಯಮೂಲ್ಯವಾದ ಹಂತವಾಗಿದೆ ಹಾಗೂ ಈ ಮಧ್ಯಸ್ಥಿಕೆಯ ಪ್ರಕ್ರಿಯೆಯಲ್ಲಿ ಮಧ್ಯಸ್ಥಿಕೆಗಾರರ ಪಾತ್ರ ಅತ್ಯಮೂಲ್ಯವಾದದ್ದು. ಆದ್ದರಿಂದ, ಈ ತರಬೇತಿ ಕಾರ್ಯಾಗಾರದ ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೌರವಾನ್ವಿತ ಸುವರ್ಣಾ ಕೆ. ಮಿರ್ಜಿ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹಾಗೂ ಅಧ್ಯಕ್ಷರು, ಖಾಯಂ ಜನತಾ ನ್ಯಾಯಾಲಯ, ಧಾರವಾಡ ಇವರು ವಹಿಸಿದ್ದರು.

ಅತಿಥಿಗಳಾಗಿ ಜಿಲ್ಲಾ ನ್ಯಾಯಾಧೀಶರಾದ ಗೌರವಾನ್ವಿತ ಎ.ಕೆ.ನಾಗರಾಜಪ್ಪ, ಗೌರವಾನ್ವಿತ ಜರೀನಾ, ಗೌರವಾನ್ವಿತ ಪೂರ್ಣಿಮಾ ಎನ್.ಪೈ. ಕರ್ನಾಟಕ ವಕೀಲರ ಪರಿಷತ್ತಿನ ಅಧ್ಯಕ್ಷರಾದ ವಿ.ಡಿ.ಕಾಮರೆಡ್ಡಿ, ಕರ್ನಾಟಕ ವಕೀಲರ ಪರಿಷತ್ತಿನ ಪೂರ್ವ ಅಧ್ಯಕ್ಷರು ಹಾಗೂ ಸದಸ್ಯರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆನಂದಕುಮಾರ ಎ ಮಗದುಮ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಧಿಕಾರೇತರ ಸದಸ್ಯರಾದ ಕೆ.ಎಲ್.ಪಾಟೀಲ, ಧಾರವಾಡ ವಕೀಲರ ಸಂಘದ ಅಧಕ್ಷರಾದ ಅಶೋಕ ವಿ ಏಣಗಿ ಹಾಗೂ ಮಧ್ಯಸ್ಥಿಕೆ ತರಬೇತಿದಾರರಾದ ಶೋಭಾ ಪಾಟೀಲ ಹಾಗೂ ಲಕ್ಷ್ಮೀಶರಾವ್ ಇವರು ಭಾಗವಹಿಸಿದ್ದರು.



# ಶ್ರೀ ಭಗವಾನ ಬುದ್ಧ ಜಯಂತಿ ನಿಮಿತ್ಯ ಪೂರ್ವಸಿದ್ಧತಾ ಸಭೆ



**ಬೆಳಗಾವಿ ವಾರ್ತೆ ಗದಗ :** ಶ್ರೀ ಭಗವಾನ ಬುದ್ಧ ಜಯಂತಿಯನ್ನು ಮೇ 1 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಭಗವಾನ ಬುದ್ಧ ಜಯಂತಿ ನಿಮಿತ್ತ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಜಯಂತಿಯ ಆಚರಣೆಗೆ ಕ್ರಮ ವಹಿಸಬೇಕು. ಎಸ್.ಎಸ್.ಎಲ್.ಸಿ, ಪಿ.ಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರಿಗೆ ಸನ್ಮಾನ ಕಾರ್ಯಕ್ರಮವು ಜರುಗಲಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಮುದ್ರಣಕ್ಕೆ ಕ್ರಮ ವಹಿಸಬೇಕು. ಭಗವಾನ ಬುದ್ಧರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮವು ಜರುಗುವುದು. ಒಟ್ಟಾರೆಯಾಗಿ ಶ್ರೀ ಭಗವಾನ ಬುದ್ಧ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಊಟೋಪಹಾರದ ವ್ಯವಸ್ಥೆ, ವೇದಿಕೆ ವ್ಯವಸ್ಥೆ, ಬ್ಯಾನರ ಅಳವಡಿಕೆ ಕುರಿತು ಚರ್ಚಿಸಲಾಯಿತು.

ಈ ಸಭೆಯಲ್ಲಿ ಎಸ್.ಎನ್.ಬಳ್ಳಾರಿ, ಸತೀಶ ಹೂಲಿ, ಐ.ಕೆ. ಕಮ್ಮಾರ, ಅಂದಾನಪ್ಪ ವಿಭೂತಿ, ಸತೀಶ ಪಾಶಿ, ಅಶೋಕ ಬರಗುಂಡಿ, ಪ್ರಕಾಶ ಅಸುಂಡಿ, ಸಿದ್ದಪ್ಪ ಲಿಂಗಧಾಳ, ರಮೇಶ ಕೊಳೂರು, ರಾಮಚಂದ್ರ ಹಂಸನೂರು, ವಾಸುದೇವ ಹುಣಸೀಮರದ, ಆರ್.ಬಿ.ಕರ್ಜಗಿ, ಆರ್.ಎಸ್.ರಜಪೂತ, ಸರ್ಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರು ರಮೇಶ ಮಾವಿನಕಾಯಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಕುಮಾರ ಸೊಪ್ಪಡ್ಲ, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ನಿಮಿತ್ಯ ಪೂರ್ವಭಾವಿ ಸಭೆ

ಗದಗ : ಸರ್ಕಾರದ ಆದೇಶದನ್ವಯ ಮೇ 10 ರಂದು ಆಚರಿಸಲಾಗುವ “ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮನವರ” ಜಯಂತಿ ನಿಮಿತ್ಯ ಏಪ್ರಿಲ್ 24 ರ ಶುಕ್ರವಾರ ಬೆಳಿಗ್ಗೆ:10.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಂಗಾರು ಹಂಗಾಮಿನ ಸಿದ್ಧತೆ ಹಾಗೂ ರಸಗೊಬ್ಬರ ಪೂರೈಕೆ ಕುರಿತು ಪ್ರಗತಿ ಪರಿಶೀಲನಾ ಸಭೆ

# ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಇರಲಿ : ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ



**ಬೆಳಗಾವಿ ವಾರ್ತೆ ಗದಗ:** ಮುಂಬರುವ ಮುಂಗಾರು ಹಂಗಾಮಿಗೆ ಜಿಲ್ಲೆಯ ರೈತರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಮತ್ತು ರಸಗೊಬ್ಬರ ಪೂರೈಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ 2026–27 ನೇ ಸಾಲಿನ ಜಿಲ್ಲಾ ಮಟ್ಟದ ಕೃಷಿ ಪರಿಕರಗಳ ಉಸ್ತುವಾರಿ ಸಮಿತಿ ಮತ್ತು ಜಾಗೃತಿ ಸಮಿತಿ ಸಭೆ ಹಾಗೂ ಮುಂಗಾರು ಹಂಗಾಮಿನ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ರೈತರಿಗೆ ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಬೇಕು. ಸಹಕಾರಿ ಸಂಘಗಳ ( ಕಂಅಖ ) ಮೂಲಕ ರಸಗೊಬ್ಬರ ಮಾರಾಟವನ್ನು ಚುರುಕುಗೊಳಿಸಬೇಕು. ರಸಗೊಬ್ಬರ ಪೂರೈಕೆಯ ಸರಪಳಿಯಲ್ಲಿ ಯಾವುದೇ ವಿಳಂಬವಾಗಬಾರದು. ಕಂಪನಿಗಳಿಂದ ರಸಗೊಬ್ಬರ ಬಿಡುಗಡೆಯಾದ ತಕ್ಷಣ, ಅದು ಪಾಯಿಂಟ್ ಆಫ್ ಸೇಲ್ (POS ) ಯಂತ್ರಗಳಲ್ಲಿ ಸರಿಯಾಗಿ ದಾಖಲಾಗುತ್ತಿದೆಯೇ ಎಂಬುದನ್ನು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಬೇಕು ಎಂದು ಹೇಳಿದರು.

ತುರ್ತು ಸಂದರ್ಭಗಳಿಗಾಗಿ ಜಿಲ್ಲೆಯಲ್ಲಿ ಅಗತ್ಯ ಪ್ರಮಾಣದ ರಸಗೊಬ್ಬರವನ್ನು ಬಫರ್ ಸ್ಟಾಕ್ ಆಗಿ ಕಾಯ್ದಿರಿಸಲು ಮತ್ತು ಅದರ ಸಕಾಲಿಕ ವಿತರಣೆಗೆ ಕ್ರಮ ಕೈಗೊಳ್ಳಬೇಕು. ರೈತರಿಗೆ ಸಕಾಲದಲ್ಲಿ ಗೊಬ್ಬರ ಸಿಗುವಂತೆ ವ್ಯವಸ್ಥೆ ಮಾಡಬೇಕೆಂದರು.

ಜಿಲ್ಲೆಗೆ ಸರಬರಾಜಾಗುವ ರಸಗೊಬ್ಬರವನ್ನು ಕಂಪನಿಗಳು ಡೀಲರ್‌ಗಳಿಗೆ ಹಂಚಿಕೆ ಮಾಡುವಾಗ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಯಾವ ಡೀಲರ್‌ಗೆ ಎಷ್ಟು ಪ್ರಮಾಣದ ಗೊಬ್ಬರ ಹಂಚಿಕೆಯಾಗಿದೆ ಎಂಬ ಮಾಹಿತಿಯನ್ನು ಕೃಷಿ ಇಲಾಖೆಗೆ ಮುಂಚಿತವಾಗಿ ಸಲ್ಲಿಸಬೇಕು. ಕೆಲವು ಡೀಲರ್‌ಗಳು ಅಥವಾ ಮಧ್ಯವರ್ತಿಗಳು ರಸಗೊಬ್ಬರವನ್ನು ದಾಸ್ತಾನು ಮಾಡಿ ಕೃತಕ ಅಭಾವ ಸೃಷ್ಟಿಸುವುದನ್ನು ತಡೆಗಟ್ಟಲು ಕೃಷಿ ಇಲಾಖೆ ಅಧಿಕಾರಿಗಳು ನಿರಂತರ ನಿಗಾವಹಿಸಬೇಕು ಎಂದು ಹೇಳಿದರು.

ಜಿಲ್ಲೆಯ ರೈತರಿಗೆ ವಿಮಾ ಸೌಲಭ್ಯಗಳನ್ನು ತಲುಪಿಸುವಲ್ಲಿ ಕೃಷಿ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು. ಮುಂಗಾರು ಹಂಗಾಮಿನ ಬೆಳೆ ಹಾನಿ ಸಂದರ್ಭದಲ್ಲಿ ರೈತರಿಗೆ ಸರಿಯಾದ ಪರಿಹಾರ ಸಿಗುವಂತೆ ವಿಮಾ ಕಂಪನಿಗಳೊಂದಿಗೆ ಸಮನ್ವಯ ಸಾಧಿಸಲು ಸೂಚಿಸಿದರು.

ಕೇವಲ ಯುರಿಯಾ ಅಥವಾ ಡಿಎಪಿ ಗೊಬ್ಬರಗಳ ಮೇಲೆ ಅವಲಂಬಿತವಾಗದೆ, ಮಣ್ಣಿನ ಗುಣಮಟ್ಟಕ್ಕೆ ಅನುಗುಣವಾಗಿ 'ಕಾಂಪ್ಲೆಕ್ಸ್' ಗೊಬ್ಬರಗಳನ್ನು ಬಳಸುವಂತೆ ರೈತರಲ್ಲಿ ಜಾಗೃತಿ ಮೂಡಿಸಬೇಕು. ಫೀಲ್ಡ್ ಮಟ್ಟದಲ್ಲಿ ಕೆಲಸ ಮಾಡುವ ಅಧಿಕಾರಿಗಳು ಕೇವಲ ಅಂಕಿ–ಅಂಶಗಳನ್ನು ನೀಡದೆ, ವಾಸ್ತವದಲ್ಲಿ ರೈತರಿಗೆ ತಲುಪಿರುವ ಸೌಲಭ್ಯಗಳ ಬಗ್ಗೆ ನಿಗಾ ವಹಿಸಬೇಕು. ಯಾವುದೇ ಹಂತದಲ್ಲಿ ಭ್ರಷ್ಟಾಚಾರ ಅಥವಾ ನಿರ್ಲಕ್ಷ್ಯ ಕಂಡುಬಂದಲ್ಲಿ ಕಟ್ಟುನಿಟ್ಟಿನ ಕ್ರಮ ಅನಿವಾರ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಎಚ್ಚರಿಕೆ ನೀಡಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಮುಕ್ತಾಯವಾಗುವ (ಏಪ್ರಿಲ್–ಸಪ್ಟಂಬರ) ವರೆಗೆ ಒಟ್ಟು 67536 ಮೆಟ್ರಿಕ್ ಟನ್ ರಸಗೊಬ್ಬರಗಳ ಅಗತ್ಯವಿದೆ. ಈಗಾಗಲೇ ಸುಮಾರು 13842 ಮೆಟ್ರಿಕ್ ಟನ್ ರಸಗೊಬ್ಬರಗಳನ್ನು ಜಿಲ್ಲೆಯಲ್ಲಿ ದಾಸ್ತಾನು ಮಾಡಲಾಗಿದೆ. ಮುಂಗಾರು ಹಂಗಾಮಿಗೆ ಒಟ್ಟಾರೆಯಾಗಿ ಯೂರಿಯಾ ರಸಗೊಬ್ಬರ–28531 ಮೆಟ್ರಿಕ್ ಟನ್ ಬೇಡಿಕೆ ಇದ್ದು, ಅದರಲ್ಲಿ ಈಗಾಗಲೇ 4492 ಮೆಟ್ರಿಕ್ ಟನ್ ದಾಸ್ತಾನು ಮಾಡಲಾಗಿದೆ. ಮುಂಗಾರು ಚಟುವಟಿಕೆ ಪ್ರಾರಂಭವಾಗುತ್ತಲೇ ಹಂತ ಹಂತವಾಗಿ ಸಕಾಲಕ್ಕೆ ಯೂರಿಯಾ ರಸಗೊಬ್ಬರಗಳ ಸರಬರಾಜಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲೆಯ ರೈತರು ಯಾರೊಬ್ಬರ ಅನಗತ್ಯ ವದಂತಿಗೆ ಕಿವಿಗೊಡದೆ ಅಗತ್ಯವಿರುವಷ್ಟು ಖರೀದಿಸಬಹುದು. ಕೆ–ಕಿಸಾನ್ App ಮೂಲಕ ರಸಗೊಬ್ಬರ ಗಳ ಖರೀದಿಗೆ ಕ್ರಮವಹಿಸಲಾಗಿದ್ದು ಕೃಷಿ ಪರಿಕರ ಮಾರಾಟಗಾರರ ಮಳಿಗೆಗಳ ಮೇಲ್ವಿಚಾರಣೆಗೆ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ರೈತರು ಆಯಾ ಬೆಳೆಗೆ ಶಿಫಾರಸ್ಸುಮಾಡಿದ ಪ್ರಮಾಣದೊಂದಿಗೆ, ವೈಜ್ಞಾನಿಕವಾಗಿಯೇ ರಸಾಯನಿಕ ಗೊಬ್ಬರ ಬಳಸುವಂತೆ ಜಿಲ್ಲಾದ್ಯಂತ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಯೂರಿಯಾ ವಿತರಣೆಗೆ "ಕೆ–ಕಿಸಾನ್ ತಂತ್ರಾಂಶ’ ಜಿಲ್ಲೆಯ ರೈತರು ಯೂರಿಯಾ ರಸಗೊಬ್ಬರಗಳನ್ನು ಖರೀದಿಸಲು ಎಫ್.ಐ.ಡಿ ಹೊಂದಿರುವುದು ಕಡ್ಡಾಯವಾಗಿದೆ. 2026–27 ರ ಮುಂಗಾರು ಹಂಗಾಮಿನಿಂದ ಹೊಸ ನಿಯಮ ಜಾರಿಗೆ ಬರಲಿದೆ. ರೈತರ ಜಮೀನಿನ ವಿಸ್ತೀರ್ಣ ಬೆಳೆದ ಬೆಳೆಯ ಅನುಗುಣವಾಗಿ ರಸಗೊಬ್ಬರದ ಅಗತ್ಯತೆಗೆ ಅನುಗುಣವಾಗಿ ಮಾತ್ರ ಕೆ–ಕಿಸಾನ್ ತಂತ್ರಾಂಶದ ಮೂಲಕ ಮಾತ್ರ ರಸಗೊಬ್ಬರಗಳನ್ನು ವಿತರಿಸಲಾಗುತ್ತದೆ ಎಂದು ಸಭೆಯಲ್ಲಿ ತಿಳಿಸಿದ್ದಾರೆ.

ಈ ಸಭೆಯಲ್ಲಿ ಡಿ.ವೈ.ಎಸ್.ಪಿ ಮಹಾಂತೇಶ್ ಸಜ್ಜನ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ವಿವಿಧ ರಸಗೊಬ್ಬರ ಕಂಪನಿಗಳ ಜಿಲ್ಲಾ ಪ್ರತಿನಿಧಿಗಳು ಹಾಗೂ ತಾಲ್ಲೂಕು ಮಟ್ಟದ ಕೃಷಿ ಅಧಿಕಾರಿಗಳು ಉಪಸ್ಥಿತರಿದ್ದರು.



ನವಲಗುಂದ ತಾಲ್ಲೂಕಿನ ಶಿರಕೋಳ ಗ್ರಾಮದಲ್ಲಿ ನಡೆಯುತ್ತಿರುವ ಮನೆಗಣತಿ ಕಾರ್ಯವನ್ನು ತಹಶೀಲ್ದಾರ್ ಸುಧೀರ ಸಾಹುಕಾರ ಬುಧವಾರ ಪರಿಶೀಲಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001